ಸಂಪುಟ : 9 ಸಂಚಿಕೆ 278 ಪುಟ : 4 ಬೆಲೆ: 3.00 ಮಂಗಳವಾರ ಡಿಸೆಂಬರ್ 17 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 278 Pages : 4 Price : 3.00 Tuesday December 17 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 17 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 11, 12 – ಇರಾನಿ ಕಾಲೋನಿ, ಕರಿಯಮ್ಮ ಕಲ್ಲು, ಪಿ ಮತ್ತು ಟಿ ಕ್ವಾರ್ಟರ್ಸ್, ಗಣಪತಿ ಕಟ್ಟಿ, ಹನುಮಂತ ದೇವರ ಗುಡಿ, ಗಾರ್ಡನ್, ರಾಘವೇಂದ್ರ ಗುಡಿ ಲೈನ್, ಚರ್ಚ್ ಭಾಗ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 28 – ಪಂಚಾಕ್ಷರಿ ನಗರ 4 ಮತ್ತು 5ನೇ ಕ್ರಾಸ್‌ಗಳು. ವಾರ್ಡ್ ನಂ. 22 – ಗಂಗಿಮಡಿ, ದೊಡ್ಡ ಮಸೂತಿ ಭಾಗಗಳು, 2,000 ಮನೆ, 1,800 ಮನೆ, 1,400 ಮನೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 26 – ಅಕ್ಕನ ಬಳಗ, ಕಲಾಮಂದಿರ ರೋಡ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ಚನ್ನಪ್ಪಗೌಡ್ರ ಲೈನ್, ಚಂದ್ರುರವರ ಲೈನ್, ಅಂಗಡಿಯವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 21, 22, 23 – ಕಗನಳ್ಳಿ, ಸೋಮನಗೌಡ್ರ ಲೈನ್, ಹೆಬಸೂರ 2 ಭಾಗಗಳು, ಹೊನ್ನೆತ್ತಮ್ಮ 2 ಭಾಗಗಳು, ಆರೋಗೇರಿ 2 ಭಾಗಗಳು, ಲಕ್ಕುಂಡಿ ಲೈನ್, ಮಾನ್ವಿ ಲೈನ್, ಗಣಪತಿ ಗುಡಿ, ಅಕ್ಕಿ ಲೈನ್, ಬಾಳಿಕಾಯಿಯವರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 4 – ಬ್ಯಾಳಿಯವರ ಲೈನ್, ಪೋಸ್ಟ್ ಆಫೀಸ್, ಮಿಷನ ಕಾಂಪೌಂಡ್, ಟರ್ನಲ್ ಪೇಟೆ, ಬಿ ಎಸ್ ಎನ್ ಎಲ್ ಆಫೀಸ್ ಪೂರ್ತಿ ಭಾಗ, 200 ಮನೆ, 250 ಮನೆ, ಕಣವಿ ಪ್ಲಾಟ್ ಪೂರ್ತಿ ಭಾಗಗಳು, ಗೌರಿ ಗುಡಿ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಹಾಗೂ ನೀರಿನ ಕರವನ್ನು ತುಂಬಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರೋಣ ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಸಮಾರಂಭ

# ಜಿ.ಎಸ್. ಪಾಟೀಲರು ಮಂತ್ರಿ ಆಗಲು ಅರ್ಹರು

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ಮತಕ್ಷೇತ್ರದಲ್ಲಿ ಶಾಸಕ ಜಿ.ಎಸ್. ಪಾಟೀಲ ನೇತೃತ್ವದಲ್ಲಿ 197 ಕೋಟಿ ರೂ. ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ಕೊಟ್ಟಿದ್ದೇವೆ. ಶಾಸಕ ಜಿ.ಎಸ್. ಪಾಟೀಲ್ ಅವರು ನನ್ನ ಬಳಿ ಬರುವುದು ರೋಣ ಮತಕ್ಷೇತ್ರದ ಅಭಿವೃದ್ಧಿ ವಿಚಾರಕ್ಕೆ ಮಾತ್ರ. ಮುಂದಿನ ಬಜೆಟ್‌ನಲ್ಲಿ ಕ್ಷೇತ್ರಕ್ಕೆ ಕೃಷಿ ಕಾಲೇಜು ನೀಡುವಂತೆ ಪಾಟೀಲರು ಒತ್ತಾಯಿಸಿದ್ದಾರೆ. ಪಾಟೀಲರಿಗೆ ಸಚಿವ ಸ್ಥಾನ ನೀಡುವಂತೆ ಕ್ಷೇತ್ರದ ಜನತೆ ಒತ್ತಾಯಿಸಿದ್ದಾರೆ. ಎರಡೂ ಬೇಡಿಕೆಗಳಿಗೂ ಸಕಾರಾತ್ಮಕವಾಗಿ ಪರಿಶೀಲಿಸಲಾಗುವುದು. ಜಿ.ಎಸ್. ಪಾಟೀಲರಿಗೆ ಮಂತ್ರಿ ಆಗುವ ಸಕಲ ಅರ್ಹತೆಗಳಿವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಜಿಲ್ಲೆಯ ರೋಣ ಪಟ್ಟಣದ ದ್ರೋಣಾಚಾರ್ಯ ತಾಲೂಕು ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ವತಿಯಿಂದ ರೋಣ ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಜಗತ್ತಿನಲ್ಲಿ ಸಿರಿಧಾನ್ಯವನ್ನು ಹೆಚ್ಚು ಹೆಚ್ಚು ಬೆಳೆಯಲು ಪ್ರಯತ್ನಿಸಲಾಗುತ್ತಿದ್ದು, ಅದಕ್ಕೆ ಪ್ರೋತ್ಸಾಹ ನೀಡಲಾಗುತ್ತಿದೆ. ಸಿರಿಧಾನ್ಯ ಹೆಚ್ಚು ನಾರಿನಾಂಶ ಇರುವ ಆಹಾರಧಾನ್ಯ. ಇದನ್ನು ಹೆಚ್ಚಾಗಿ ಬಳಸುವುದರಿಂದ ನಮ್ಮ ಶರೀರದಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚುತ್ತದೆ.

ಡಯಾಬಿಟಿಸ್ ನಿಯಂತ್ರಣಕ್ಕೆ ಅನುಕೂಲವಾಗುತ್ತದೆ ಎಂದರು.

ಗ್ಯಾರಂಟಿ ಯೋಜನೆ ಜಾರಿ ಮಾಡಿದ ಮೇಲೆ ಅಭಿವೃದ್ಧಿ





ಕೆಲಸಗಳಿಗೆ ಹಣವಿಲ್ಲ ಎಂದು ವಿರೋಧ ಪಕ್ಷ ನಮ್ಮ ಮೇಲೆ ಟೀಕೆ ಮಾಡುತ್ತಿದೆ. ಅಭಿವೃದ್ಧಿಗೆ ಹಣ ಇಲ್ಲದೆ ಹೋದರೆ ಇಷ್ಟೊಂದು ಕಾರ್ಯಗಳನ್ನು ಮಾಡಲು ಸಾಧ್ಯವಿರಲಿಲ್ಲ. ವಿರೋಧ ಪಕ್ಷದವರು ರಾಜ್ಯದ ಜನತೆಗೆ ಆರ್ಥಿಕವಾಗಿ, ಸಾಮಾಜಿಕವಾಗಿ ಸಹಾಯಬಾಗಬಾರದು, ಸಮಾನತೆ ಬರಬಾರದು ಎಂಬ ಉದ್ದೇಶದಿಂದ ಗ್ಯಾರಂಟಿ ಯೋಜನೆಗಳ ಜೊತೆಗೆ ಬಡವರಿಗೆ ಮಾಡುವ ಕಾರ್ಯಕ್ರಮಗಳಿಗೆ ವಿರೋಧ ಮಾಡುತ್ತಿದ್ದಾರೆ. ಆದರೆ ರಾಜ್ಯದ ಜನತೆ ಇವರ ಸುಳ್ಳು ನಂಬುವಷ್ಟು ಮೂರ್ಖರಲ್ಲ ಎಂದರು. ಸಂವಿಧಾನ ರಕ್ಷಿಸಲು, ಪ್ರಜಾಪ್ರಭುತ್ವ ಉಳಿಸಲು ಎಲ್ಲ ಧರ್ಮವನ್ನು ಒಟ್ಟಿಗೆ ತೆ-ಗೆದುಕೊಂಡು ಹೋಗುವ ಪ್ರಯತ್ನ ಮಾಡುತ್ತಿದ್ದೇವೆ. ಜಾತಿ ವ್ಯವಸ್ಥೆಯನ್ನು ತೊಲಗಿಸಿ ಸಮಾಜದಲ್ಲಿ ಸಮಸಮಾಜವನ್ನು ನಿರ್ಮಾಣ ಮಾಡಬೇಕು ಎಂಬುದು ನಮ್ಮ ಸರ್ಕಾರದ ಉದ್ದೇಶ ಎಂದರು. ಗಜೇಂದ್ರಗಡದಲ್ಲಿ ಗೃಹಲಕ್ಷ್ಮೀ ಯೋಜನೆಯ ಹಣವನ್ನು ಉಳಿಸಿ ಕೊಳವೆಬಾವಿಯನ್ನು ಕೊರೆಸಿದ್ದಾರೆ. ಇಂತಹ ಕಾರ್ಯಕ್ರಮ ಮೂಲಕ ನೇರವಾಗಿ ಫಲಾನುಭವಿಗಳಿಗೆ ಹಣ ನೀಡುವ ಕೆಲಸ ಮಾಡುತ್ತಿದ್ದೇವೆ. ಸಾಮಾಜಿಕವಾಗಿ, ಆರ್ಥಿಕವಾಗಿ ಬಲ ತುಂಬಿಸುವ ಕೆಲಸ ಮಾಡುತ್ತಿದ್ದೇವೆ ಎಂದರು. ಡಂಬಳದಲ್ಲಿ ತೋಟಗಾರಿಕೆ ಕಾಲೇಜು ಆರಂಭಿಸುವ ಕುರಿತು ಶಾಸಕ ಜಿ.ಎಸ್. ಪಾಟೀಲರು ಬೇಡಿಕೆಯಿಟ್ಟಿದ್ದು, ಮುಂದಿನ ಬಜೆಟ್‌ನಲ್ಲಿ ನೂರಕ್ಕೆ ನೂರಷ್ಟು ಪರಿಗಣಿಸುತ್ತೇವೆ ಎಂದರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಮಾತನಾಡಿ, ವಿಪಕ್ಷದವರು ಭಾವನೆಗಳ ಜೊತೆ ರಾಜಕಾರಣ ಮಾಡಿದರೆ, ನಾವು ನಮ್ಮ ಗ್ಯಾರಂಟಿ ಮೂಲಕ ಬಡವರ ಬದುಕಿನಲ್ಲಿ ಬದಲಾವಣೆ ತಂದಿದ್ದೇವೆ. ಜಿ.ಎಸ್. ಪಾಟೀಲರ ಕುಟುಂಬ ಸೇವಕರ ರೀತಿಯಲ್ಲಿ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ನಿರುದ್ಯೋಗಿಗಳಿಗೆ ಅನುಕೂಲ ಕಲ್ಪಿಸಲು ಜಿಟಿಟಿಸಿ ಆರಂಭಿಸಲಾಗುತ್ತಿದೆ. ಬಡಮಕ್ಕಳಿಗೆ ವಿದ್ಯಾಭ್ಯಾಸ ಕಲ್ಪಿಸಲು ಆರು ಹಾಸ್ಟೆಲ್ ಆರಂಭಿಸಲಾಗುತ್ತಿದೆ. ನಮ್ಮ ರೋಣ ಮತಕ್ಷೇತ್ರದ ಗ್ರಾಮೀಣ ಪ್ರದೇಶದ ರಸ್ತೆಗಳು ಅಭಿವೃದ್ಧಿಯಾಗಬೇಕು. ಕೃಷ್ಣಾ ನದಿ ಹಾಗೂ ಮಲಪ್ರಭಾ ನದಿ ಮೂಲಕ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಮಾಡಬೇಕು. ಮುಂಡರಗಿ ಭಾಗದಲ್ಲಿ ನೂರಾರು ಕೆರೆಗಳನ್ನು ತುಂಬಿಸುವ ಜಾಲವಾಡಗಿ ಯೋಜನೆ ಆರಂಭಿಸಬೇಕು ಎಂದು ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯ, ಸರಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕ ಬಿ.ಬಿ. ಚಿಮ್ಮನಕಟ್ಟಿ, ಮಾಜಿ ಸಂಸದ ಆರ್.ಎಸ್. ಪಾಟೀಲ, ಐ.ಜಿ. ಸನದಿ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್ಲ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಬಿ.ಎಸ್. ಪಾಟೀಲ, ಆನಂದಸ್ವಾಮಿ ಗಡ್ಡದೇವರಮಠ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಪಂ ಸಿಇಒ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿ ಇತರರು ಇದ್ದರು.

> ವಿರೋಧ ಪಕ್ಷದವರು ಸರಕಾರದ ಖಜಾನೆ ಖಾಲಿ ಎಂದು ಬೊಬ್ಬೆ ಹೊಡೆಯುತ್ತಿದ್ದಾರೆ. ಆದರೆ, ನನ್ನ ಕ್ಷೇತ್ರದಲ್ಲಿ 200 ಕೋಟಿ ರೂ. ಅಧಿಕ ಅನುದಾನದಲ್ಲಿ ಅಭಿವೃದ್ಧಿ ಯೋಜನೆಗಳ ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ಇದಕ್ಕೆ ದುಡ್ಡು ಎಲ್ಲಿಂದ ಬಂತು ಎಂದು ಶಾಸಕ ಜಿ.ಎಸ್. ಪಾಟೀಲ ಪ್ರಶ್ನಿಸಿದರು.



### ಅಭಿವೃದ್ಧಿಯೇ ತಂದೆ-ತಾಯಿ

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಮಾತನಾಡಿ, ಇಂದಿನ ಈ ಕಾರ್ಯಕ್ರಮ ಐತಿಹಾಸಿಕ ಪುಟಕ್ಕೆ ಸೇರುವಂತಹ ಕಾರ್ಯಕ್ರಮ. ಜಿ.ಎಸ್. ಪಾಟೀಲರ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ ಕಲ್ಲುಗಳನ್ನು ನೋಡಿದರೆ ಒಂದು ಮನೆಯನ್ನೇ ಕಟ್ಟಿಸಬಹುದು. ಅಭಿವೃದ್ಧಿಯೇ ತಂದೆ-ತಾಯಿ, ಗ್ಯಾರಂಟಿಗಳೇ ಬಂಧುಬಳಗ ಎಂದು ಹೇಳಿದರು. ಗ್ಯಾರಂಟಿ ಯೋಜನೆಗಳನ್ನು ಸಮರ್ಥವಾಗಿ ಜಾರಿ ಮಾಡುವ ಮೂಲಕ ಕೊಟ್ಟ ಮಾತುಗಳನ್ನು ಉಳಿಸಿಕೊಂಡಿದ್ದೇವೆ. ಉಳಿಸಿಕೊಳ್ಳುವುದು ನಮ್ಮ ಕರ್ತವ್ಯ. ಅನ್ನಭಾಗ್ಯದಲ್ಲಿ ದಾಸೋಹ, ಗೃಹಲಕ್ಷ್ಮೀಯಲ್ಲಿ ಸಬಲೀಕರಣ, ಗೃಹಜ್ಯೋತಿ ಸಮಾಜಕ್ಕೆ ಬೆಳಕು, ಶಕ್ತಿ ಯೋಜನೆ ಮೂಲಕ ಮಹಿಳೆಗೆ ಸ್ವಾತಂತ್ರ್ಯ, ಯುವನಿಧಿಯ ಮೂಲಕ ಕಾಯಕವನ್ನು ನೀಡಲಾಗಿದೆ ಎಂದು ಹೇಳಿದರು.

## ಪೂರಕ ಅಂದಾಜು ಬೇಡಿಕೆ ಮಂಡನೆ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಬೆಳಗಾವಿ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನ ಸಭೆ ಅಧಿವೇಶನದ ಸೋಮವಾರ ನಡೆದ ಕಲಾಪದಲ್ಲಿ, ಮುಖ್ಯಮಂತ್ರಿಗಳ ಪರವಾಗಿ ಕಂದಾಯ ಸಚಿವ ಕೃಷ್ಣಭೈರೇಗೌಡ ಅವರು 2024-25ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಕಂತಿನ ಬೇಡಿಕೆಗಳನ್ನು ಮಂಡಿಸಿದರು.

ಧನ ವಿನಯೋಗ ಅಧಿನಿಯಮದ ಆಧಾರದಲ್ಲಿ, ಹೊಸ ಸೇವೆಗಾಗಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಪೂರಕ ಅಥವಾ ಹೆಚ್ಚಿನ ವೆಚ್ಚದ ಅವಶ್ಯಕತೆ ಉಂಟಾದರೆ, ಅಂದಾಜು ಮಾಡಿದ ವೆಚ್ಚದ ಮೊಬಲಗನ್ನು ತೋರಿಸುವ ಮತ್ತೊಂದು ವಿವರಣೆಯನ್ನು ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸಲು ಸಂವಿಧಾನದ 205(1)(ಎ)ರ ಅನುಚ್ಛೇದವು ಅವಕಾಶ ಕಲ್ಪಿಸಿದೆ. ಇದರ ಅನುಸಾರ ಕಂದಾಯ ಸಚಿವ ರೂ.5317.83 ಕೋಟಿ ಪೂರಕ ಅಂದಾಜುಗಳು ಎರಡನೇ ಕಂತಿನ ಬೇಡಿಕೆಯನ್ನು ಸದನದಲ್ಲಿ ಮಂಡಿಸಿದರು.

### ವಿವಿಧ ಅಭಿವೃದ್ಧಿ ಕಾರ್ಯಗಳ ಶಂಕುಸ್ಥಾಪನೆ, ಉಧ್ಘಾಟನೆ । ಸಮಾವೇಶಕ್ಕೆ ಹರಿದು ಬಂದ ಜನಸಾಗರ

# ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ರೋಣ

ಮತಕ್ಷೇತ್ರದ ಅಭಿವೃದ್ಧಿಗೆ 200 ಕೋಟಿ ರೂಗಳನ್ನು ಈಗಾಗಲೇ ಸರಕಾರ ನೀಡಿದೆ. ಆದರೆ ನಮ್ಮದು ಹಿಂದುಳಿದ ತಾಲೂಕು. ಹೀಗಾಗಿ, ಕ್ಷೇತ್ರದ ಅಭಿವೃದ್ಧಿಗೆ ಸರಕಾರ ಹೆಚ್ಚಿನ ಮಹತ್ವ ನೀಡಬೇಕು ಎಂದು ಖನಿಜ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ರವಿವಾರ ರೋಣ ತಾಲೂಕಾ ಕ್ರೀಡಾಂಗಣದಲ್ಲಿ ಜರುಗಿದ 200 ಕೋಟಿ ರೂ ವೆಚ್ಚದ ವಿವಿಧ ಅಭಿವೃದ್ಧಿ ಕಾರ್ಯಗಳ ಶಂಕುಸ್ಥಾಪನೆ ಹಾಗೂ ಉಧ್ಘಾಟನೆ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ರೋಣ ಮತಕ್ಷೇತ್ರ ಡಂಬಳದವರೆಗೆ ವಿಸ್ತರಿಸಿರುವುದರಿಂದ ಹೆಚ್ಚಿನ ನೆರವು ಬೇಕು. ಅಲ್ಲದೆ, ಈ ಭಾಗದ ನೀರಾವರಿಗೆ ಆದ್ಯತೆ ಸಿಗಬೇಕು. ಮುಖ್ಯವಾಗಿ ಆರೋಗ್ಯ ಹಾಗೂ ಶೈಕ್ಷಣಿಕ ಚಟುವಟಿಕೆಗಳಿಗೆ ಅನುದಾನ ಒದಗಿಸಬೇಕು



ಎಂದ ಅವರು, ನಮ್ಮ ಕ್ಷೇತ್ರ ಬಯಲು ಸೀಮೆಯಾಗಿದ್ದು, ಕೆರೆ ತುಂಬಿಸುವ ಕೆಲಸ ಶೀಘ್ರವಾಗಿ ಆಗಬೇಕಿದೆ ಎಂದರು.

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ, ಸಚಿವ ಎಚ್.ಕೆ. ಪಾಟೀಲ, ಮುಖ್ಯ ಸಚೇತಕ ಸಲೀಂ ಅಹ್ಮದ, ಮಾಜಿ ಸಂಸದರಾದ ಆರ್.ಎಸ್. ಪಾಟೀಲ, ಐ.ಜಿ. ಸನದಿ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್ಲ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಐ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಯೂಸುಪ್ ಇಟಗಿ ಸೇರಿದಂತೆ ಅನೇಕ ಮುಖಂಡರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

> ರಾಜ್ಯ ಸರಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಿಂದ ಇಂದು ಅನೇಕ ಬಡವರಿಗೆ, ಮಹಿಳೆಯರಿಗೆ, ವಿದ್ಯಾರ್ಥಿಗಳಿಗೆ ಸಹಕಾರಿಯಾಗಿದೆ. ಈ ಯೋಜನೆಗಳಿಂದ ಬಡವರು ಆರ್ಥಿಕ ಸಂಕಷ್ಟದಿಂದ ಹೊರ ಬಂದಿದ್ದು, ಅನೇಕ ಮಹಿಳೆಯರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡುವ ಮೂಲಕ ಅಕ್ಷರ ಜ್ಞಾನಕ್ಕೆ ಮಹತ್ವ ನೀಡಿದ್ದಾರೆ. ಇಂತಹ ಮಹತ್ವದ ಯೋಜನೆಗಳನ್ನು ಬಿಜೆಪಿಯವರು ವಿರೋಧ ಮಾಡುತ್ತಿರುವುದು ನಾಚಿಕೆ ತರುವ ಸಂಗತಿಯಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

## ಸಂಘಟನೆಯಿಂದ ಕಾರ್ಮಿಕರ ಬದುಕು ಹಸನು



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕಾರ್ಮಿಕ ಸಂಘಟನೆಯಿಂದ ಬದುಕು ಸದೃಢವಾಗಲು ಸಹಕಾರಿಯಾಗುತ್ತದೆ ಎಂದು ಯುವ ಮುಖಂಡ ಕೃಷ್ಣಗೌಡ ಪಾಟೀಲ್ ಹೇಳಿದರು.

ಅವರು ಪಟ್ಟಣದ ಅಂಜುಮನ್ ಎ ಇಸ್ಲಾಂ ಶಾದಿ ಹಾಲ್‌ನಲ್ಲಿ ಉದಯ ಕಟ್ಟಡ ನಿರ್ಮಾಣ ಕೂಲಿ ಕಾರ್ಮಿಕರ ಸಂಘದ 9ನೇ ವಾರ್ಷಿಕೋತ್ಸವ ಹಾಗೂ ಹಿರಿಯ ನಾಗರಿಕರ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಕಾರ್ಮಿಕ ಸಂಘಟನೆಯಿಂದ ಸದೃಢ ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗುತ್ತದೆ. ಪ್ರತಿಯೊಬ್ಬ ಕಾರ್ಮಿಕರಿಗೂ ಕೇಂದ್ರ ಹಾಗೂ ರಾಜ್ಯ ಸರಕಾರ ಆರೋಗ್ಯ, ಮಕ್ಕಳ ಶಿಕ್ಷಣಕ್ಕೆ ಸಹಾಯ ಸಹಕಾರ, ಕಾರ್ಮಿಕರು ಮರಣ ಹೊಂದಿದಲ್ಲಿ ಸಹಾಯಧನ ನೀಡಲಾಗುತ್ತಿದ್ದು, ಇವುಗಳ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಅಧ್ಯಕ್ಷತೆಯನ್ನು ಉದಯ ಕಟ್ಟಡ ನಿರ್ಮಾಣ ಕೂಲಿ ಕಾರ್ಮಿಕರ ಸಂಘದ ಅಧ್ಯಕ್ಷ ಎಂ.ಎ. ಸಿದ್ದಿ ವಹಿಸಿದ್ದರು. ಗದಗ ಕಾರ್ಮಿಕ ಇಲಾಖೆ ನಿರೀಕ್ಷಕಿ ಸುಷ್ಮಾ, ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಬಿ.ವಿ. ಸುಂಕಾಪೂರ, ಪ.ಪಂ ಸ್ಥಾಯಿ ಸಮಿತಿ ಅಧ್ಯಕ್ಷ ಇಮಾಮಸಾಬ ಶೇಖ, ಎಸ್.ಸಿ. ಬಡ್ನಿ, ತಾಜುದ್ದೀನ ಕಿಂಡ್ರಿ, ಕೆ.ಎಲ್. ಕರಿಗೌಡ್ರ, ಡಾ. ಎಸ್.ಸಿ. ಚವಡಿ, ವಿಜಯ ನೀಲಗುಂದ, ಸೈಯದಲಿ ಶೇಖ ಇದ್ದರು.

## ಧಾರವಾಡದಲ್ಲಿ ರಾಷ್ಟ್ರೀಯ ಲೋಕ ಅದಾಲತ್ 73,811 ಪ್ರಕರಣಗಳು ಇತ್ಯರ್ಥ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಡಿ.14ರಂದು ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇದ್ದ, ರಾಜೀ ಆಗಬಹುದಾದ 17,596 ಪ್ರಕರಣಗಳನ್ನು ತೆ-ಗೆದುಕೊಂಡು ಅವುಗಳ ಪೈಕಿ 12,551 ಪ್ರಕರಣಗಳನ್ನು ಹಾಗೂ 63,013 ವ್ಯಾಜ್ಯ ಪೂರ್ವ ಪ್ರಕರಣಗಳ ಪೈಕಿ 61,260 ಪ್ರಕರಣಗಳನ್ನು ಸೇರಿ ಒಟ್ಟು 73,811 ಪ್ರಕರಣಗಳನ್ನು ರಾಜೀ ಸಂಧಾನ ಮಾಡಿಸಲಾಗಿದೆ. ವ್ಯಾಜ್ಯ ಪೂರ್ವ ಪ್ರಕರಣಗಳಲ್ಲಿ ಇತ್ಯರ್ಥ ಪಡಿಸಿಕೊಂಡ ಒಟ್ಟು ಮೊತ್ತ 8,09,37,468 ರೂಪಾಯಿಗಳು. ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದ್ದ ಪ್ರಕರಣಗಳಲ್ಲಿ ಇತ್ಯರ್ಥ ಪಡಿಸಿಕೊಂಡ



ಒಟ್ಟು ಮೊತ್ತ 54,59,56,204 ರೂಪಾಯಿಗಳು.

ಧಾರವಾಡ ಜಿಲ್ಲೆಯ ನ್ಯಾಯಾಲಯಗಳಲ್ಲಿ ವಿಚಾರಣೆಯಲ್ಲಿದ್ದ ವೈವಾಹಿಕ, ಜೀವನಾಂಶ ಪ್ರಕರಣಗಳಲ್ಲಿ ನಡೆದ ರಾಜೀ ಸಂಧಾನದ ಪರವಾಗಿ 8 ಪ್ರಕರಣಗಳು ಯಶಸ್ವಿಯಾಗಿ ದಂಪತಿಗಳು ಒಂದಾಗಿದ್ದಾರೆ.

31 ಪ್ರಕರಣಗಳಲ್ಲಿ ಹಿರಿಯ ನಾಗರಿಕರು ರಾಜೀ ಪ್ರಕರಣದ ಮೂಲಕ ತಮ್ಮ ವಿವಾದಗಳನ್ನು ಇತ್ಯರ್ಥಪಡಿಸಿಕೊಂಡಿದ್ದಾರೆ. ಲೋಕ ಅದಾಲತ್‌ನಲ್ಲಿ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಸೂಕ್ತ ಸಲಹೆ ಸೂಚನೆಗಳನ್ನು ನೀಡಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಜಿ. ರಮಾ ಹಾಗೂ ಧಾರವಾಡ ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ, ನ್ಯಾಯವಾದಿಗಳಿಗೆ, ಬ್ಯಾಂಕ್, ಸಹಕಾರಿ ಸಂಘ, ಹಣಕಾಸು ಸಂಸ್ಥೆ, ವಿಮಾ ಕಂಪನಿಗಳು ಅವುಗಳ ನ್ಯಾಯವಾದಿಗಳಿಗೆ, ಅಭಿಯೋಜನೆಯ ಅಧಿಕಾರಿಗಳಿಗೆ, ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಮತ್ತು ಕಕ್ಷಿದಾರರಿಗೆ ಧಾರವಾಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪರವಾಗಿ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಸದಸ್ಯ ಕಾರ್ಯದರ್ಶಿ ಪರಶುರಾಮ ದೊಡ್ಡಮನಿ ಕೃತಜ್ಞತೆ ತಿಳಿಸಿದ್ದಾರೆ.

# ಪದ್ಮಶ್ರೀ ಪುರಸ್ಕೃತ ವೃಕ್ಷಮಾತೆ ತುಳಸಿ ಗೌಡ ವಿಧಿವಶ!



■ ವಿಜಯಸಾಕ್ಷಿ ಸುದ್ದಿ, ಕಾರವಾರ

ಪದ್ಮಶ್ರೀ ಪುರಸ್ಕೃತ ವೃಕ್ಷಮಾತೆ ತುಳಸಿ ಗೌಡ ವಿಧಿವಶರಾಗಿದ್ದಾರೆ.

87 ವಯಸ್ಸಿನ ತುಳಸಿಗೌಡ ಅವರು, ಅನಾರೋಗ್ಯದಿಂದ ನಿಧನರಾದರು. ತಮ್ಮ ಇಳಿ ವಯಸ್ಸಿನಲ್ಲಿಯೂ ಪರಿಸರದ ಬಗ್ಗೆ ಅಪಾರ ಕಾಳಜಿ ಹೊಂದಿದ್ದ ತುಳಸಿ ಗೌಡ, ಸಾಲು ಸಾಲು ಗಿಡ ನೆಟ್ಟು ಪೋಷಿಸಿದ ಹಿರಿಮೆ ಇವರಿಗಿದೆ.

ಲಕ್ಷಾಂತರ ಮರಗಳನ್ನು ನೆಟ್ಟು ಪೋಷಿಸಿದ ಮಹಾತಾಯಿ ತುಳಸಿ ಗೌಡ ಇಹಲೋಕ ತ್ಯಜಿಸಿದ್ದಾರೆ.

ಬಡಕುಟುಂಬದಲ್ಲಿ ಜನಿಸಿದ ಈ ವೃಕ್ಷಮಾತೆ ಕಟ್ಟಿಗೆ ಸಂಗ್ರಹಿಸಿ ಮಾರಾಟ ಮಾಡಿ ಜೀವನ ಸಾಗಿಸುತ್ತಿದ್ದರು. ಅಲ್ಲದೇ ಮತ್ತಿಘಟ್ಟ ಅರಣ್ಯ ನರ್ಸರಿಯಲ್ಲಿ ಸೇವೆ ಮಾಡಿ ನಿವೃತ್ತರಾದರೂ ಈಗಲೂ ಅಲ್ಲಿಗೆ ಹೋಗಿ ಯುವಕರಿಗೆ ತರಬೇತಿ, ಮಾರ್ಗದರ್ಶನ ನೀಡುತ್ತಿದ್ದರು. ಇನ್ನು ತುಳಸಿ ಗೌಡ ಕಳೆದ ಆರು ದಶಕಗಳಿಂದ ಈ ಕೆಲಸವನ್ನು ಯಾವುದೇ ಪ್ರತಿಫಲ, ನಿರೀಕ್ಷೆ ಇಲ್ಲದೆ ಮಾಡುತ್ತಿದ್ದರಂತೆ.

ತುಳಸಿ ಅವರು ಜನಿಸಿದ್ದು ಬಡತನದಿಂದ ಬಳಲುತ್ತಿದ್ದ ಹಾಲಕ್ಕಿ ಬುಡಕಟ್ಟು ಕುಟುಂಬದಲ್ಲಿ. ಅವರು ಕೇವಲ ಎರಡು ವರ್ಷದಲ್ಲಿದ್ದಾಗ ಅವರ ತಂದೆ ಸಾವನ್ನಪ್ಪಿದರು. ಬಳಿಕ ಶಿಕ್ಷಣದಿಂದಲೇ ವಂಚಿತರಾದ ತುಳಸಿ ಗೌಡ ತನ್ನ ತಾಯಿಯೊಂದಿಗೆ ಕೂಲಿ ಕೆಲಸದ ಹಾದಿಯನ್ನು ಹಿಡಿದರು. ತುಳಸಿ ಚಿಕ್ಕ ವಯಸ್ಸಿನಲ್ಲಿಯೇ ಗೋವಿಂದ ಗೌಡ ಅವರನ್ನು ವಿವಾಹವಾದರು. ಆದರೆ ಅವರು ಕೂಡಾ ಕೆಲವೇ ವರ್ಷಗಳಲ್ಲಿ ನಿಧನರಾದರು.

ಆದರೆ ಈ ಎಲ್ಲಾ ಆಘಾತಗಳನ್ನು ಎದುರಿಸಿದ ತುಳಸಿ ಗೌಡ ಇಂದು ಇಡೀ ವಿಶ್ವಕ್ಕೆ ಮಾದರಿ ಮಹಿಳೆಯಾಗಿದ್ದಾರೆ.

# ಬಿಜೆಪಿ ನಾಯಕರು ಸಂವಿಧಾನದ ಬಗ್ಗೆ ಮಾತನಾಡುವಷ್ಟು ಬದಲಾಗಿದ್ದಾರೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಜೆಪಿ ನಾಯಕರು ಸಂವಿಧಾನದ ಬಗ್ಗೆ ಮಾತನಾಡುವಷ್ಟು ಬದಲಾಗಿದ್ದಾರೆ ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ವಿಶೇಷ ಚರ್ಚೆಯಲ್ಲಿ ಭಾಗಿಯಾಗಿ ಮಾತನಾಡಿದ ಅವರು, ನೀವು ಸಾಮಾಜಿಕ ವಾದದ ಬಗ್ಗೆ ಮಾತನಾಡುತ್ತೀರಿ. ಐದು ಸಾವಿರ ವರ್ಷದಿಂದ ಮನುಸ್ಮೃತಿ ಮೂಲಕ ನೀವು ಹೇಗೆ ನಮಗೆ ತೊಂದರೆ ಕೊಟ್ಟಿದ್ದೀರಿ ಎಂದು ನಾವು ಹೇಳಬೇಕಾಗುತ್ತದೆ.

ಬಿಜೆಪಿ ನಾಯಕರು ಸಂವಿಧಾನದ ಬಗ್ಗೆ ಮಾತನಾಡುವಷ್ಟು ಬದಲಾಗಿದ್ದಾರೆ. ಈ ಬದಲಾವಣೆ ಯಾವಾಗ ಆಗಿದೆ ಗೊತ್ತಿಲ್ಲ. 2024ರ ಚುನಾವಣೆ ಬಳಿಕ ಆಯಿತಾ ಎನ್ನುವುದು ಗೊತ್ತಿಲ್ಲ. ದೇಶದ ಜನರು ಕನಿಷ್ಠ ಇವರು ಸಂವಿಧಾನದ ಬಗ್ಗೆ ಮಾತನಾಡುವಂತೆ ಮಾಡಿದ್ದಾರೆ.

1949ರಲ್ಲಿ ಆರ್‌ಎಸ್‌ಎಸ್ ನಾಯಕರು ಮನುಸ್ಮೃತಿ ಆಧರಿಸಿದ ಸಂವಿಧಾನ ಅಲ್ಲ ಎಂದು ವಿರೋಧ ಮಾಡಿದರು. ಇಂದಿಗೂ ಮನುಸ್ಮೃತಿ ಅವರ ಮನಸ್ಸಿನಲ್ಲಿದೆ ಎಂದು ಖರ್ಗೆ ಹೇಳಿದರು.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನಲ್ಲಿ ವಿವಿಧ ಕ್ರೀಡಾಕೂಟದಲ್ಲಿ ರಾಜ್ಯ, ರಾಷ್ಟ್ರ, ವಿಶ್ವವಿದ್ಯಾಲಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ವಿಜೇತರಾದ ಗದಗ ಜಿಲ್ಲೆಯ ಕ್ರೀಡಾಪಟುಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರೋತ್ಸಾಹ ಧನವನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2024 ರ ಜನವರಿ 1 ರಿಂದ ಡಿಸೆಂಬರ್ 31 ರವರೆಗೆ ವಿವಿಧ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ರಾಜ್ಯ, ರಾಷ್ಟ್ರ, ವಿಶ್ವವಿದ್ಯಾಲಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ನಮೂನೆಗಳು, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರ ಕಾರ್ಯಾಲಯದಲ್ಲಿ ಲಭ್ಯವಿದ್ದು, ಡಿಸೆಂಬರ್ 31 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372–238345 ಗೆ ಸಂಪರ್ಕಿಸಲು ಕೋರಿದೆ.

**ಕೊಪ್ಪಳ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಜಿಲ್ಲಾ ಮಟ್ಟದ 2ನೇ ಚುಟುಕು ಕವಿಗೋಷ್ಠಿ**

# ಉತ್ಕೃಷ್ಟ ಸಾಹಿತ್ಯ ಕೃತಿ ಪ್ರಕಟಿಸಲು ಮುಂದಾಗಿ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಯುವ ಸಾಹಿತಿಗಳು ಮತ್ತು ಸಾಹಿತ್ಯಾಸಕ್ತರು ಚುಟುಕು ಸಾಹಿತ್ಯದ ಅಧ್ಯಯನ ಮಾಡುವ ಮೂಲಕ ಭವಿಷ್ಯದಲ್ಲಿ ಉತ್ಕೃಷ್ಟ ಸಾಹಿತ್ಯ ಕೃತಿ ಪ್ರಕಟಿಸಲು ಮುಂದಾಗಬೇಕೆಂದು ಗಜಲ್ ಕವಯತ್ರಿ ಹಾಗೂ ಶಿಕ್ಷಕಿ ಅರುಣಾ ನರೇಂದ್ರ ಪಾಟೀಲ್ ಸಲಹೆ ನೀಡಿದರು.

ಅವರು ನಗರದ ಕಿನ್ನಾಳ ರಸ್ತೆಯ ಸೇಂಟ್ ಪಾಲ್ಸ್ ಪದವಿ ಕಾಲೇಜಿನಲ್ಲಿ ಕೊಪ್ಪಳ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಆಯೋಜಿಸಿದ್ದ ಜಿಲ್ಲಾ ಮಟ್ಟದ 2ನೇ ಚುಟುಕು ಕವಿಗೋಷ್ಠಿ, ಉಪನ್ಯಾಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ನಾಡಿನ ಅನೇಕ ಕವಿಗಳು ಚುಟುಕು ಸಾಹಿತ್ಯ ರಚನೆಯಲ್ಲಿ ತೊಡಗಿ, ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ. ದಿನಕರ ದೇಸಾಯಿ, ಸಿ.ಪಿ.ಕೆ, ಚಂಪಾ, ಎಚ್. ದುಂಡಿರಾಜ್, ಕೊಪ್ಪಳದಲ್ಲಿ ಶಿ.ಕಾ. ಬಡಿಗೇರ, ಅಲ್ಲಮಪ್ರಭು ಬೆಟ್ಟದೂರು, ಶಿವಪ್ರಸಾದ್ ಹಾದಿಮನಿ ಮುಂತಾದವರು ಚುಟುಕು ಸಾಹಿತ್ಯ ರಚನೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಹೇಳಿದರು.



ವಕೀಲ ಹಾಗೂ ಉಪನ್ಯಾಸಕ ಪ್ರಕಾಶ್ ಹಳ್ಳಿಗುಡಿ ವಿಶೇಷ ಉಪನ್ಯಾಸ ನೀಡಿ, ಸಾಮಾಜಿಕ ಜಾಲತಾಣಗಳ ಅಬ್ಬರದಲ್ಲಿ ಓದುವ ಅಭಿರುಚಿ ಕಡಿಮೆ ಆಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿ, ದಿನಕರ ದೇಸಾಯಿ ಅವರ ಸಾಹಿತ್ಯ ಕೃತಿ ಮತ್ತು ದೇಸಾಯಿ ಅವರ ವ್ಯಕ್ತಿತ್ವದ ಬಗ್ಗೆ ವರ್ಣಿಸಿದರು.

ಚುಟುಕು ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ರುದ್ರಪ್ಪ ಭಂಡಾರಿ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಕವಿಯತ್ರಿ ಶಾರದಾ ಶ್ರಾವಣ ಸಿಂಗ್ ರಜಪೂತ, ಅಕ್ಕಮಹಾದೇವಿ ಅಂಗಡಿ, ಶ್ವೇತಾ ಜೋಶಿ, ರವಿ ಹಿರೇಮನಿ, ಪ್ರದೀಪ ಹದ್ದಣ್ಣವರ್, ರಮೇಶ್,

ಅಧ್ಯಕ್ಷತೆ ವಹಿಸಿದ್ದ ರಾಷ್ಟ್ರಪ್ರಶಸ್ತಿ ವಿಜೇತ ನಿವೃತ್ತ ಶಿಕ್ಷಕ ಎ.ಪಿ. ಅಂಗಡಿ ಮಾತನಾಡಿ, ಜಿಲ್ಲೆಯಲ್ಲಿ ತುಕ್ಕು ಹಿಡಿದಿದ್ದ ಚುಟುಕು ಸಾಹಿತ್ಯ ಚಟುವಟಿಕೆಗಳಿಗೆ ಈಗ ಹೊಸ ಪದಾಧಿಕಾರಿಗಳು ಜೀವ ತುಂಬಿದ್ದಾರೆ. ಯುವ ಸಾಹಿತಿಗಳು ಒಂದುಗೂಡಿ ನಿರಂತರ ಸಾಹಿತ್ಯಿಕ ಕೆಲಸ ಮಾಡುವ ಸಂಕಲ್ಪ ಮಾಡಬೇಕು ಎಂದು ತಿಳಿಸಿದರು.

ಶಿವಪ್ರಸಾದ್ ಹಾದಿಮನಿ, ಬಸವರಾಜ ಸಂಕನಗೌಡ್ರು, ಮುತ್ತುರಾಜ್ ಅಂಗಡಿ ಮೊದಲಾದವರು ಉತ್ತಮ ಚುಟುಕ ವಾಚನ ಮಾಡಿದರು. ನಂತರ ಕವಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು.

ನಿವೃತ್ತ ಉಪನ್ಯಾಸಕ ಎಸ್.ಬಿ. ಬೀಳಗಿಮಠ, ಡಾ. ನರಸಿಂಹ ಗುಂಜಹಳ್ಳಿ, ಅಮೀನ್ ಸಾಹೇಬ್, ನಾಗರಾಜ್, ಸಂಗೀತಾ, ಮನು ಪ್ರಿಯಾ ಇತರರು ಉಪಸ್ಥಿತರಿದ್ದರು. ಪೂಜಾ ಗಂಟೆ ಪ್ರಾರ್ಥಿಸಿದರು. ಶಿವಪ್ರಸಾದ್ ಹಾದಿಮನಿ ಸ್ವಾಗತಿಸಿದರು. ಡಾ. ಮಹಾಂತೇಶ್ ನೆಲಾ ಗಣಿ ನಿರೂಪಿಸಿದರು.

# ಶಂಕರಭಾರತಿ ಮಠದಲ್ಲಿ ದತ್ತ ಜಯಂತಿ ಸಂಪನ್ನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶಂಕರಭಾರತಿಮಠದಲ್ಲಿ ಬ್ರಹ್ಮವೃಂದ (ಬ್ರಾಹ್ಮಣ ಸಮಾಜ)ದ ವತಿಯಿಂದ ದತ್ತ ಜಯಂತಿ ಅಂಗವಾಗಿ ದಿ.8ರಿಂದ ಅನೇಕ ಧಾರ್ಮಿಕ ಕಾರ್ಯಕ್ರಮಗಳು ನಡೆದು ಸೋಮವಾರ ವಟು ಪೂಜೆ ಮತ್ತು ಸತ್ಯನಾರಾಯಣ ಪೂಜೆಯೊಂದಿಗೆ ಸಂಪನ್ನವಾಯಿತು.

ಶನಿವಾರ ದತ್ತಾತ್ರೇಯ ತೊಟ್ಟಿಲೋತ್ಸವ, ರವಿವಾರ ವಿಶ್ವಶಾಂತಿಗಾಗಿ ದತ್ತ ಹೋಮವನ್ನು ಶಾಸ್ತ್ರೋಕ್ತವಾಗಿ ನೆರವೇರಿಸಲಾಯಿತು. ದತ್ತಜಯಂತಿ ನಿಮಿತ್ತ ನಿತ್ಯ ಭಜನೆ, ರುದ್ರಾಭಿಷೇಕ, ವಿಶೇಷ ಅಲಂಕಾರ, ಭಜನೆ, ಗುರುಚರಿತ್ರೆ ಪಾರಾಯಣ, ಮಹಿಳೆಯರಿಂದ ಭಜನಾ ಕಾರ್ಯಕ್ರಮಗಳು ಸಾಂಗವಾಗಿ ನಡೆದವು. ಬಾಲಚಂದ್ರಭಟ್ ಹುಲಮನಿ ಅವರ ಮಾರ್ಗದರ್ಶನದಲ್ಲಿ



ಶ್ರೀಕಾಂತ ಪೂಜಾರ ಗುರುಚರಿತ್ರೆ ಪಾರಾಯಣವನ್ನು ಮಾಡಿದರು.

ಸೋಮವಾರ ಕೊನೆಯ ದಿವಸ ಸತ್ಯನಾರಾಯಣ ಪೂಜೆ ಹಾಗೂ ವಟು ಪೂಜೆಗಳನ್ನು ನೆರವೇರಿಸಲಾಯಿತು. ಹಿರಿಯ ವೈದಿಕರಾದ ಅನಂತಭಟ್ ಪೂಜಾರ ವಟು ಪೂಜೆಯನ್ನು ಶಾಸ್ತ್ರೋಕ್ತವಾಗಿ ನಡೆಸಿಕೊಟ್ಟರು. ಡಾ. ಪ್ರಸನ್ನ ಕುಲಕರ್ಣಿ ದಂಪತಿಗಳು ವಟು ಪೂಜೆಯನ್ನು ನೆರವೇರಿಸಿದರು. ನಂತರ ಮದುಕರಿ ಸೇವೆ, ಮಹಾಪ್ರಸಾದ ಸಾಂಗವಾಗಿ ನೆರವೇರಿತು. ಬಾಲಚಂದ್ರಭಟ್ ಹುಲಮನಿ, ಶ್ರೀಕಾಂತ ಪ್ರಜಾರರನ್ನು ಸಮಾಜದ ವತಿಯಿಂದ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್, ಶಂಕರ ಸೇವಾ ಸಮಿತಿ ಅಧ್ಯಕ್ಷ ವಿ.ಎಲ್. ಪೂಜಾರ, ತಾಲೂಕಾಧ್ಯಕ್ಷ ಕೃಷ್ಣ ಕುಲಕರ್ಣಿ, ಕಾರ್ಯದರ್ಶಿ ಅರವಿಂದ ದೇಶಪಾಂಡೆ, ಶಂಕರ ಬೆಟಗೇರಿ, ಗುರಣ್ಣ ಪಾಟೀಲಕುಲರ್ಣಿ, ಕೆ.ಎಸ್. ಕುಲಕರ್ಣಿ, ನಾರಾಯಣಭಟ್ ಪುರಾಣಿಕ, ದೃವ ಬೆಟಗೇರಿ, ಅನಿಲ ಕುಲಕರ್ಣಿ, ಬಿ.ಕೆ. ಕುಲಕರ್ಣಿ, ರಮೇಶ ಕುಲಕರ್ಣಿ, ನಾಗರಾಜ ಪ್ರಜಾರ ಹಾಗೂ ಸಮಾಜ ಬಾಂಧವರು, ವಿಪ್ರ ಮಹಿಳೆಯರು ಸೇರಿದಂತೆ ನೂರಾರು ಜನರು ಪಾಲ್ಗೊಂಡಿದ್ದರು.

# ಯುವನಿಧಿಗೆ ಪ್ರತಿ ತಿಂಗಳು ಧೃಡೀಕರಣ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಯವನಿಧಿ ಯೋಜನೆಯಲ್ಲಿ ಪದವೀಧರರಿಗೆ 3000ರೂ. ಮತ್ತು ಡಿಪ್ಲೋಮಾ ಮಾಡಿದವರಿಗೆ 1500ರೂ. ಗಳನ್ನು ನಿರುದ್ಯೋಗಿ ಭತೆ-ೄಯಾಗಿ ನೀಡುತ್ತಿದ್ದು ಜನವರಿ–2023 ರ ನಂತರ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಯಾಗಿ 180 ದಿನಗಳನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿದೆ.

ಅಭ್ಯರ್ಥಿಗಳು ಈ ಪ್ರಯೋಜನ ಪ್ರತಿ ತಿಂಗಳು ಪಡೆಯಲು ತಾನು ನಿರುದ್ಯೋಗಿಯೆಂದು ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಾಗಿಲ್ಲವೆಂದು ಸ್ವಯಂ ಘೋಷಣೆಯನ್ನು ಪ್ರತಿ ತಿಂಗಳು 25 ರೊಳಗಾಗಿ ಸ್ವಯಂ ಧೃಡೀಕರಣ ಮಾಡಬೇಕು. ಸೇವಾ ಸಿಂದು ಪೋರ್ಟಲ್ ಲಾಗಿನ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ ದಾಖಲೆ ಪರಿಶೀಲನೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ. 08372–220609 ಗೆ ಸಂಪರ್ಕಿಸಬಹುದು.

**'ಕನಕದಾಸರ ತಾತ್ವಿಕತೆ: ಆಧುನಿಕ ಸಮಾಜದ ಪರಿಕಲ್ಪನೆ' ರಾಷ್ಟ್ರೀಯ ಸಮ್ಮೇಳನದಲ್ಲಿ ಪ್ರೊ. ಬಿ.ಡಿ. ಕುಂಬಾರ**

# ಕನಕದಾಸರ ಕೀರ್ತನೆಗಳನ್ನು ಓದಿ ತಿಳಿದುಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಹದಿನಾರನೆಯ ಶತಮಾನದಲ್ಲಿಯೇ ಸಮಾನತೆಯ ಮಂತ್ರ ಸಾರಿದವರು ಕನಕದಾಸರು. ಧರ್ಮ ಜಾತಿಗಳಗಳ ಮಧ್ಯೆ ಸ್ಪರ್ಧೆ ಏರ್ಪಡದೇ ಸಾಮರಸ್ಯದಿಂದ ಪ್ರತಿಯೊಬ್ಬರೂ ಬಾಳಬೇಕು ಎಂದು ದಾವಣಗೆರೆ ವಿವಿ ಕುಲಪತಿ ಪ್ರೊ. ಬಿ.ಡಿ. ಕುಂಬಾರ ಹೇಳಿದರು.

ಕವಿವಿ ಕನಕ ಅಧ್ಯಯನ ಪೀಠದ ಆಶ್ರಯದಲ್ಲಿ ಕನಕ ಜಯಂತಿಯ ಅಂಗವಾಗಿ ಶನಿವಾರ ಕರ್ನಾಟಕ ವಿಶ್ವವಿದ್ಯಾಲಯದ ಕನಕ ಅಧ್ಯಯನ ಪೀಠದ ಆಶ್ರಯದಲ್ಲಿ ಕನಕ ಜಯಂತಿಯ ನಿಮಿತ್ತ 'ಕನಕದಾಸರ ತಾತ್ವಿಕತೆ: ಆಧುನಿಕ ಸಮಾಜದ ಪರಿಕಲ್ಪನೆ' ವಿಷಯ ಕುರಿತ ಏರ್ಪಡಿಸಲಾಗಿದ್ದ ಒಂದು ದಿನದ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಯುವ ಪೀಳಿಗೆಯವರು ಕನಕದಾಸರ ಕೀರ್ತನೆಗಳನ್ನು ಓದಿ ತಿಳಿದುಕೊಳ್ಳಬೇಕು. ಬಸವ, ಬುದ್ಧ, ಅಂಬೇಡ್ಕರರ ವಿಚಾರಗಳನ್ನು ತಮ್ಮ ಸಾಹಿತ್ಯದಲ್ಲಿ ಮನುಕುಲದ



ಉದ್ಧಾರಕ್ಕೆ ಕನಕದಾಸರು ತಿಳಿಸಿ ಹೇಳಿದ್ದಾರೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಪ್ರಭಾರ ಕುಲಪತಿ ಪ್ರೊ. ಬಿ.ಎಂ. ಪಾಟೀಲ, ಡಾ.ಅಂಬೇಡ್ಕರರ ಆಶಯಗಳು ಕನಕದಾಸರ ಸಾಹಿತ್ಯದಲ್ಲಿವೆ ಎಂದು ಹೇಳಿದರು. ಡಾ.ಶಶಿಧರ ಜಿ. ವೈದ್ಯ ಕನಕದಾಸ: ಎ ವಿಜನರಿ ಆಫ್ ಹಾರ್ಮನಿ' ಇಂಗ್ಲೀಷ್ ಕೃತಿಯನ್ನು ಸಮಾರಂಭದಲ್ಲಿ ಬಿಡುಗಡೆ ಮಾಡಲಾಯಿತು.

ಹಣಕಾಸು ಅಧಿಕಾರಿ ಪ್ರೊ. ಸಿ. ಕೃಷ್ಣಮೂರ್ತಿ, ಮಾಜಿ ಕುಲಪತಿ ಪ್ರೊ. ಕೆ.ಬಿ. ಗುಡಸಿ, ರವಿ ಮಾಳಿಗೇರ, ಡಿ.ಡಿ. ಮಾಳಗಿ ಉಪಸ್ಥಿತರಿದ್ದರು.

ಆಶಯ ಭಾಷಣ ಮಾಡಿದ ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ಮಲ್ಲಿಕಾ ಘಂಟಿ, ಕನಕದಾಸರನ್ನು ದೈವತ್ವಕ್ಕೆ ಹೋಲಿಸಿ ಜನರಿಂದ ದೂರ ಇಡಲು ಪ್ರಯತ್ನಿಸಲಾಗುತ್ತಿದೆ. ಹೀಗೆ ಮಾಡಬಾರದು ಎಂದು ಹೇಳಿದ ಅವರು, ಸಣ್ಣ ಕೀರ್ತನೆಗಳ ಮೂಲಕ ಇಡೀ ಭಾರತದ ಸಂಪ್ರದಾಯವನ್ನು ಕನಕದಾಸರು ಕಟ್ಟಿಕೊಟ್ಟಿದ್ದಾರೆ. ಪುರುಷ ಪ್ರಧಾನ ಸಮಾಜವನ್ನು ಕನಕದಾಸರು ಬಹಳ ಹಿಂದೆಯೇ ಟೀಕಿಸಿದ್ದಾರೆ ಎಂದರು.

ಮೌಲ್ಯಮಾಪನ ಕುಲಸಚಿವ ಪ್ರೊ.ನಿಜಲಿಂಗಪ್ಪ ವಾಯ್.ಮಟ್ಟಿಹಾಳ ಸ್ವಾಗತಿಸಿದರು. ರಾಷ್ಟ್ರೀಯ ಸಮ್ಮೇಳನದ ಸಂಘಟನಾ ಕಾರ್ಯದರ್ಶಿ ಹಾಗೂ ಕನಕ ಅಧ್ಯಯನ ಪೀಠದ ಸಂಯೋಜಕ ಡಾ.ಹನಮಗೌಡ ಸಿ ಪ್ರಾಸ್ತಾವಿಕ ಮಾತನಾಡಿದರು. ಪ್ರೊ.ವೇದಮೂರ್ತಿ ಎ.ಬಿ ಪರಿಚಯಿಸಿದರು. ಡಾ.ಅನಿತಾ ಹಾಲಮತ ನಿರೂಪಿಸಿದರು. ಕಲಾನಿಕಾಯ, ಡೀನ್ ಪ್ರೊ. ಮೃತ್ಯುಂಜಯ ಅಗಡಿ ವಂದಿಸಿದರು.

**ತೆಗ್ಗಿನಮಠ ಸಂಸ್ಥಾನದಲ್ಲಿ ಲಿಂ.ಚಂದ್ರಮೌಳೀಶ್ವರ ಶ್ರೀಗಳ 10ನೇ ವರುಷದ ಪುಣ್ಯ ಸ್ಮರಣೋತ್ಸವ**

# ಧರ್ಮದಿಂದ ವಿಮುಖನಾದರೆ ಅವನತಿ ನಿಶ್ಚಿತ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಅಂತರಂಗ–ಬಹಿರಂಗ ಶುದ್ಧಗೊಳಿಸುವ ಶಕ್ತಿ ಗುರುವಿಗಿದೆ. ಅರಿತು ಬಾಳಿದರೆ ಬಾಳು ಬಂಗಾರ. ಮರೆತು ಬಾಳಿದರೆ ಬಾಳು ಬಂಧನಕಾರಿ. ಧರ್ಮ ಪರಿಪಾಲನೆಯಿಂದ ಮನುಷ್ಯ ವಿಮುಖನಾದರೆ ಜೀವನದಲ್ಲಿ ಅವನತಿ ತಪ್ಪಿದ್ದಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ತೆಗ್ಗಿನಮಠ ಸಂಸ್ಥಾನದಲ್ಲಿ ಲಿಂ.ಚಂದ್ರಮೌಳೀಶ್ವರ ಶ್ರೀಗಳ 10ನೇ ವರುಷದ ಪುಣ್ಯ ಸ್ಮರಣೋತ್ಸವ ಹಾಗೂ ಇಂದಿನ ವರಸದ್ಯೋಜಾತ ಶ್ರೀಗಳ ಪಟ್ಟಾಧಿಕಾರ 9ನೇ ವಾರ್ಷಿಕೋತ್ಸವ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಉರಿಯುವ ಜ್ಯೋತಿ ತನಗಾಗಿ ಉರಿಯುವುದಿಲ್ಲ. ಜಗಕೆ ಬೆಳಕು ನೀಡಲು ತನ್ನನ್ನು ತಾನು ಸುಟ್ಟುಕೊಳ್ಳುವಂತೆ ಶ್ರೀ ಗುರು ಸಹ ಭಕ್ತರ ಕಲ್ಯಾಣಕ್ಕಾಗಿ ಸದಾ ಶ್ರಮಿಸುತ್ತಾನೆ. ವರ್ತಮಾನ ಭವಿಷ್ಯತ್ತುಗಳಿಗೆ ಇತಿಹಾಸದ ಅರಿವು ಇರಬೇಕೆಂಬುದು ಲಿಂ.ಚಂದ್ರಮೌಳೀಶ್ವರ ಶ್ರೀಗಳವರ ಆಶಯವಾಗಿತ್ತು. ಸಂಪತ್ತು ಬೆಳೆದಂತೆಲ್ಲ ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿರುವ ಇಂದಿನ ದಿನಗಳಲ್ಲಿ ಸಂಸ್ಕಾರ, ಸಂಸ್ಕೃತಿಯ ಅರಿವನ್ನು ತಿಳಿದುಕೊಳ್ಳುವ ಅವಶ್ಯಕತೆ ಇದೆಯೆಂದರಿತು ಭಕ್ತರ ಶ್ರೇಯೋಭಿವೃದ್ಧಿಗಾಗಿ ಸದಾ ಶ್ರಮಿಸಿದರು.

ಶೈಕ್ಷಣಿಕ ಕ್ಷೇತ್ರದಲ್ಲಿ ಅದ್ಭುತ ಸತ್ಕ್ರಾಂತಿಯನ್ನು ಮಾಡಿ ಜ್ಞಾನ



ಸಂವರ್ಧನೆಗಾಗಿ ಸದಾ ಶ್ರಮಿಸಿದ್ದನ್ನು ಮರೆಯಲಾಗದೆಂದ ಅವರು, ಲಿಂ.ಚಂದ್ರಮೌಳೀಶ್ವರ ಶ್ರೀಗಳು ಬದುಕಿರುವಾಗಲೇ ಗೌರವ ಡಾ-ಕ್ಟರೇಟ್ ಪ್ರಾಪ್ತವಾಗಬೇಕಾಗಿತ್ತು. ಈಗ ಮರಣೋತ್ತರವಾಗಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಕೊಟ್ಟಿರುವುದು ತಮಗೆ ಸಮಾಧಾನ ತಂದಿದೆ ಎಂದರು.

ಸಮಾರಂಭ ಉದ್ಘಾಟಿಸಿ ಉಪದೇಶಾಮೃತ ನೀಡಿದ ಎಮ್ಮಿಗನೂರು ಹಂಪಿ ಸಾವಿರದೇವರ ಮಠದ ವಾಮದೇವ ಮಹಾಂತ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಶುದ್ಧವಾದ ಬುದ್ಧಿ ಸಂಪತ್ತಿನ ಆಗರವೆಂದು ಭಾವಿಸಿದ ಚಂದ್ರಮೌಳೀಶ್ವರ ಶಿವಾಚಾರ್ಯ ಸ್ವಾಮಿಗಳು ಬೆಂಗಾಡಾದ ಹರಪನಹಳ್ಳಿಯ ಶೈಕ್ಷಣಿಕ ವಲಯದಲ್ಲಿ ಅದ್ಭುತ ಸಾಧನೆಗೈದರು. ಹಣ ಮತ್ತು ಅಧಿಕಾರದ ಬಗೆಗೆ ಚಿಂತಿಸುವ ಮನುಷ್ಯ ತನ್ನ ದೇಶ, ಧರ್ಮ, ಸಂಸ್ಕೃತಿಯ ಬಗೆಗೂ ಹೆಚ್ಚಿನ ಅಭಿಮಾನ–ಶೃದ್ಧೆ ಇರಬೇಕೆಂಬುದು ಅವರ ಆಶಯವಾಗಿತ್ತು ಎಂದರು.

ಕೂಡ್ಲಿಗಿ ಪ್ರಶಾಂತ ಸಾಗರ ಶಿವಾಚಾರ್ಯರು ಉಪಸ್ಥಿತರಿದ್ದರು. ಟಿ.ಎಂ.ಎ.ಇ.ಸಂಸ್ಥೆ ಕಾರ್ಯದರ್ಶಿ ಡಾ. ಟಿ.ಎಂ. ಚಂದ್ರಶೇಖರಯ್ಯ ಸಮಾರಂಭದ ಅಧ್ಯಕ್ಷತೆ ವಹಿಸಿ ಲಿಂ. ಚಂದ್ರಮೌಳೀಶ್ವರ ಶ್ರೀಗಳವರ ನಿರಂತರ ಪರಿಶ್ರಮ ಮತ್ತು ಸಾಧನೆ ಇಂದಿನ ಬೆಳಕಿಗೆ ಮೂಲವೆಂದು ಸ್ಮರಿಸಿದರು.

ಸಮಾರಂಭದಲ್ಲಿ ಡಾ. ಪಿ.ಕೆ. ಎಂ.ಪ್ರಶಾಂತ್, ಸಾಲಿ ಬಸವರಾಜ, ಪಿ.ವಿಜಯ್‌ಕುಮಾರ್, ಟಿ.ಎಂ. ಪ್ರತೀಕ್, ಹೆಚ್.ಎಂ. ಲಲಿತಮ್ಮ, ಬಣಕಾರ್ ನಾಗರತ್ನಮ್ಮ, ಹರಾಳ್ ಅಶೋಕ್, ಟಿ.ಎಂ. ವಿಶ್ವನಾಥ, ಟಿ.ಎಂ. ಶಿವಶಂಕರ್, ಕುಲಸಚಿವ ಕೆ.ಎಸ್. ರುದ್ರೇಶ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಡಾ. ಕೆ.ಮಧು, ಹೆಚ್.ಎಂ. ಕೊಟ್ರಯ್ಯ, ಕೆ.ಕುಮಾರ್, ಪರಮೇಶ್ವರಗೌಡ್ರು, ಎಂ.ಚಂದ್ರಣ್ಣ, ಪೂಜಾರ ಬಸವರಾಜಪ್ಪ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಸಿ.ಎಂ. ಕೊಟ್ರಯ್ಯ ಸ್ವಾಗತಿಸಿದರು. ಎಸ್.ದ್ವಾರಕೀಶರೆಡ್ಡಿ ನಿರೂಪಣೆ ಮಾಡಿದರು. ತೆಗ್ಗಿನಮಠ ಸಂಸ್ಥಾನದ ಕಲಾ ಬಳಗದಿಂದ ಸಂಗೀತ ಸೇವೆ ಹಾಗೂ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಇದೇ ಸಂದರ್ಭದಲ್ಲಿ ಬೆಳಿಗ್ಗೆ ರಾಮಘಟ್ಟ ಪುರವರ್ಗಮಠದ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳಿಂದ ವೀರಮಾಹೇಶ್ವರ ವಟುಗಳಿಗೆ ಶಿವದೀಕ್ಷಾ ಅಯ್ಯಾಚಾರಗಳು ಜರುಗಿದವು. ಕಾರ್ಯಕ್ರಮದ ನಂತರ ಅನ್ನ ದಾಸೋಹ ಜರುಗಿತು.

ನೇತೃತ್ವ ವಹಿಸಿದ ತೆಗ್ಗಿನಮಠ ಸಂಸ್ಥಾನದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜ್ಞಾನ ಕ್ರಿಯಾತ್ಮಕವಾದ ಧರ್ಮದ ಪರಿಪಾಲನೆಯಿಂದ ಶಾಂತಿ ನೆಲೆಸಲು ಸಾಧ್ಯ. ಧರ್ಮ ಮತ್ತು ಧರ್ಮಾಚರಣೆ ಮರೆತರೆ ಜೀವನದಲ್ಲಿ ಅವನತಿ ನಿಶ್ಚಿತ. ಹಣ ಕಳೆದುಕೊಂಡು ಬದುಕಬಹುದು. ಆದರೆ ಗುಣ ಕಳೆದುಕೊಂಡು ಬಾಳಲಾಗದೆಂಬ ನಿಲುವನ್ನು ಚಂದ್ರಮೌಳೀಶ್ವರ ಶ್ರೀಗಳು ಹೊಂದಿದ್ದರು. ವಿಜ್ಞಾನ ತಂತ್ರಜ್ಞಾನ ಬೆಳೆದಂತೆ ಮನುಷ್ಯನ ಭಾವನೆಗಳು ವಿಕಾಸಗೊಳ್ಳದಿರುವುದೇ ಇಂದಿನ ಅವಾಂತರಗಳಿಗೆ ಕಾರಣವೆಂದರೆ ತಪ್ಪಾಗದು. ಲಿಂ. ಚಂದ್ರಮೌಳೀಶ್ವರ ಶ್ರೀಗಳವರು ಹಾಕಿದ ಧರ್ಮ ದಾರಿ ಮತ್ತು ಶ್ರೀ ರಂಭಾಪುರಿ ಜಗದ್ಗುರುಗಳವರ ಮಾರ್ಗದರ್ಶನದಲ್ಲಿ ಶ್ರೀ ಮಠ ಹಾಗೂ ಸಮಾಜದ ಶ್ರೇಯೋಭಿವೃದ್ಧಿ ಮಾಡುವುದೇ ನಮ್ಮ ಧ್ಯೇಯವಾಗಿದೆ ಎಂದರು.

# ಗುರುಗಳನ್ನು, ಶಾಲೆಯನ್ನು ಸದಾ ಗೌರವಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಎಸ್.ಎಮ್. ಕೃಷ್ಣ ನಗರದ ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಗಂಡು ಮಕ್ಕಳ ಶಾಲೆ ನಂ.5, ಹಾಗೂ ರಾಜೀವಗಾಂಧಿ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಎಂ.ಜಿ. ಚಾರಿಟೇಬಲ್ ಟ್ರಸ್ಟ್ ಹಾಗೂ ಅಬುಹುರೇರಾ ಮಸ್ಜಿದ್‌ನ ವತಿಯಿಂದ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿಟ್ರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಎಂ.ಜಿ. ಚಾರಿಟೇಬಲ್ ಟ್ರಸ್ಟ್‌ನ ಕಾರ್ಯದರ್ಶಿ ಮೌಲಾನಾ ಅಬ್ದುಲಗಪೂರಸಾಬ ಪಲ್ಲೇದ, ವಿದ್ಯಾರ್ಥಿಗಳೆಲ್ಲರೂ ಶಿಕ್ಷಕರನ್ನು ಹಾಗೂ ಶಾಲೆಯನ್ನು ಗೌರವಿಸಿ ಅವರ ಆಶೀರ್ವಾದವನ್ನು ಪಡೆಯುವುದರೊಂದಿಗೆ ಅತ್ಯುತ್ತಮ ನಾಗರಿಕರಾಗಿ ಬೆಳೆಯಬೇಕು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಎಂ.ಜಿ. ಚಾರಿಟೇಬಲ್ ಟ್ರಸ್ಟ್ ಸದಾ ಬೆನ್ನೆಲುಬಾಗಿ ನಿಲ್ಲುತ್ತದೆ ಎಂದರು. ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಶಾಲೆಗೆ ಬರಬೇಕಾದರೆ ನಿಮ್ಮ ತಂದೆ-ತಾಯಿಯನ್ನು ನಮಸ್ಕರಿಸಿ ಬರಬೇಕು. ಹಾಗೆಯೇ ಶಾಲೆಗೂ ಸಹ ನಮಿಸಿ ಬರಬೇಕು. ಏಕೆಂದರೆ ಶಾಲೆ ಜ್ಞಾನದ ದೇಗುಲವಿದ್ದಂತೆ ಎಂದು ವಿದ್ಯಾರ್ಥಿ ಗಳಿಗೆ ಕಿವಿಮಾತನ್ನು ಹೇಳಿದರು. ಬಿಆರ್‌ಪಿ ಎಂ.ಎ. ಯರಗುಡಿಯವರು ಮಾತನಾಡುತ್ತಾ, ಎಂ.ಜಿ. ಚಾರಿಟೇಬಲ್ ಟ್ರಸ್ಟ್ ಸಾಕಷ್ಟು ಮಾನವೀಯ ಕೆಲಸಗಳನ್ನು ಮಾಡುತ್ತ, ಪ್ರತಿ ವರ್ಷ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಿಸುತ್ತ ಬಂದಿದೆ ಎಂದರು. ವೇದಿಕೆಯ ಮೇಲೆ ಎಂ.ಜಿ. ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷ ಮಕ್ತುಮಸಾಬ ನಾಯ್ಕ, ಸುಲೇಮಾನ ಕಿಲ್ಲೇದಾರ, ಅಬುಹುರೇರಾ ಮಸ್ಜಿದ್ ಕಾರ್ಯದರ್ಶಿ ಮಹಮ್ಮದ್ ಸಾಬ ಬೋಲ್ಡೇಖಾನ, ಖಜಾಂಚಿ ಮೈನುದ್ದಿನ್ ಗುಜಮಾಗಡಿ, ಆಯಾ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಜರಿದ್ದರು.

**ವಿಧಾನ ಪರಿಷತ್ತಿನಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾಹಿತಿ**

# ಭ್ರೂಣ ಹತ್ಯೆ ಸಂಬಂಧಿಸಿದಂತೆ 8 ಪ್ರಕರಣ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**

ರಾಜ್ಯದಲ್ಲಿ 2023-24ರಿಂದ ಇಲ್ಲಿಯವರೆಗೆ ಭ್ರೂಣಹತ್ಯೆ ಸಂಬಂಧಿಸಿದಂತೆ 8 ಪ್ರಕರಣ ದಾಖಲಿಸಿ 46 ಜನರನ್ನು ಬಂಧಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಅವರು ಸೋಮವಾರ ವಿಧಾನ ಪರಿಷತ್ತಿನಲ್ಲಿ ಸದಸ್ಯ ಜಗದೇವ ಗುತ್ತೇದಾರ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

ರಾಜ್ಯದಲ್ಲಿ ಸ್ಕ್ಯಾನಿಂಗ್ ಸೆಂಟರ್ ಮತ್ತು ಆಸ್ಪತ್ರೆಗಳ ಮೇಲೆ ತಪಾಸಣೆಗಳನ್ನು ಜಾಸ್ತಿ ಮಾಡಿರುವುದರಿಂದ ಹೆಚ್ಚಿನ ಸಂಖ್ಯೆಯ ಭ್ರೂಣ ಹತ್ಯೆ ಪ್ರಕರಣಗಳು ಕಂಡುಹಿಡಿಯಲಾಗಿದೆ ಹಾಗೂ ಸರ್ಕಾರಕ್ಕೆ ವರದಿಯಾಗುತ್ತಿದೆ ಎಂದರು.

ರಾಜ್ಯದಲ್ಲಿ ಭ್ರೂಣ ಹತ್ಯೆ ತಡೆಯಲು ಸರ್ಕಾರವು ಪಿ.ಸಿ & ಪಿ.ಎನ್.ಡಿ.ಟಿ. ಕಾಯ್ದೆಯಡಿ ಬರುವ ಎಲ್ಲಾ ಶಾಸನಬದ್ಧ ಸಮಿತಿಗಳನ್ನು ರಾಜ್ಯ ಮತ್ತು ಜಿಲ್ಲೆಗಳಲ್ಲಿ ರಚನೆ ಮಾಡಲಾಗಿದೆ.

2018ರಿಂದ ರಾಜ್ಯದಲ್ಲಿ 'ಬಾಲಿಕಾ' ಆನ್‌ಲೈನ್ ಸಾಫ್ಟ್‌ವೇರ್ ಮುಖಾಂತರ ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಕಡ್ಡಾಯವಾಗಿ ನೋಂದಣಿ ಮತ್ತು ನವೀಕರಣ ನಡೆಸಲಾಗುತ್ತಿದೆ.

ರಾಜ್ಯ ಮಟ್ಟದಲ್ಲಿ ಶೇ.100ರಷ್ಟು ಗರ್ಭಿಣಿಯರ ನೋಂದಣಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು,



ಗ್ರಾಮ ಮಟ್ಟದಲ್ಲಿ ಜನನ ಸಮಯದ ಲಿಂಗಾನುಪಾತದ ದತ್ತಾಂಶಗಳನ್ನು ಮಾಹಿತಿ ತಂತ್ರಜ್ಞಾನದ ಮುಖಾಂತರ ಮೇಲ್ವಿಚಾರಣೆ ಮಾಡಲು ಅವಕಾಶ ಕಲ್ಪಿಸಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಇದುವರೆಗೂ ಪಿ.ಸಿ & ಪಿ.ಎನ್.ಡಿ.ಟಿ. ಕಾಯ್ದೆಯನ್ನು ಉಲ್ಲಂಘಿಸಿರುವ ಸ್ಕ್ಯಾನಿಂಗ್ ಸೆಂಟರ್ /ಮಾಲೀಕರು/ ವೈದ್ಯರ ವಿರುದ್ಧ ಒಟ್ಟು 136 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದ್ದು, 74 ಪ್ರಕರಣಗಳು ದಂಡ ವಿಧಿಸಿ ಖುಲಾಸೆಗೊಂಡಿದ್ದು, 65 ಪ್ರಕರಣಗಳು ನ್ಯಾಯಾಲಯದಲ್ಲಿ ವಿವಿಧ ಹಂತದಲ್ಲಿ ಬಾಕಿಯಿರುತ್ತದೆ ಎಂದು ತಿಳಿಸಿದರು.

ಪಿ.ಸಿ. & ಪಿ.ಎನ್.ಡಿ.ಟಿ. ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಜ್ಯ ಕಾರ್ಯಪಡೆಯನ್ನು ರಚಿಸಲಾಗಿದ್ದು, ರಾಜ್ಯ ಮಟ್ಟದಿಂದ ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಮಂಡ್ಯ, ಕೋಲಾರ ಜಿಲ್ಲೆಗಳಲ್ಲಿ ಗುಪ್ತ ಕಾರ್ಯಚರಣೆ ನಡೆಸಲಾಗಿದೆ ಎಂದರು.

ಹೆಣ್ಣು ಭ್ರೂಣ ಹತ್ಯೆ ಮಾಡದಂತೆ ರಾಜ್ಯಾದ್ಯಂತ ಜನ ಜಾಗೃತಿ ಹಾಗೂ ಅರಿವು ಮೂಡಿಸುವಂತಹ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ಅವರು ವಿವರಿಸಿದರು.

ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುವಂತಹ ಸ್ಕ್ಯಾನಿಂಗ್ ಸೆಂಟರ್ /ಆಸ್ಪತ್ರೆ/ ವೈದ್ಯರು / ದಲ್ಲಾಳಿಗಳು /ಗರ್ಭಿಣಿಯರ ಸಂಬಂಧಿಕರ ವಿರುದ್ಧ ಮಾಹಿತಿ ನೀಡಿ, ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಸಹಕರಿಸುವ ಮಾಹಿತಿದಾರರಿಗೆ ಕರ್ನಾಟಕ ಸರ್ಕಾರದಿಂದ ನೀಡುತ್ತಿದ್ದ ಬಹುಮಾನವನ್ನು ರೂ.50 ಸಾವಿರದಿಂದ ರೂ.1 ಲಕ್ಷದವರೆಗೆ ಹೆಚ್ಚಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

# ಗ್ರಾಮಗಳ ಅಭಿವೃದ್ಧಿಗೆ ಕರ ಪಾವತಿಸಿ




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಗ್ರಾಮ ಪಂಚಾಯಿತಿಗಳು ಆರ್ಥಿಕವಾಗಿ ಸದೃಢವಾಗಲು ಕರ ವಸೂಲಾತಿ ಅವಶ್ಯಕವಾಗಿದ್ದು, ಪ್ರತಿಯೊಬ್ಬರೂ ಕರ ಪಾವತಿಸಿ ಎಂದು ಪಿಡಿಒ ಬಿ.ಎನ್. ಬಚೇನಹಳ್ಳಿ ಹೇಳಿದರು.

ಅವರು ನಾಗಾವಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ಹಮ್ಮಿಕೊಂಡಿದ್ದ ತೆರಿಗೆ ವಸೂಲಾತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, ಗ್ರಾಮಗಳು ಇಂದು ಅಭಿವೃದ್ಧಿ ಪಥದತ್ತ ಸಾಗುತ್ತಿದ್ದು, ಅದಕ್ಕೆ ಪೂರಕವಾಗಿ ಆರ್ಥಿಕವಾಗಿ ಸದೃಢವಾಗಲು ಮನೆ ಕರ, ನೀರಿನ ಕರವನ್ನು ಪ್ರತಿಯೊಬ್ಬರೂ ತುಂಬಬೇಕು. ಇದರಿಂದ ಗ್ರಾಮ ಅಭಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ ಎಂದರು.

ಗಣೇಶ ಪೂಜಾರ, ಎಸ್.ಬಿ. ಛಲವಾದಿ, ಎಸ್.ಬಿ. ಪಾಟೀಲ್, ವಿ.ಎಲ್. ಕೆಂಚಣ್ಣನವರ, ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು ಇದ್ದರು.

# ಬಗರ್‌ಹುಕುಂ ಸಾಗುವಳಿದಾರರಿಂದ ಬೆಳಗಾವಿ ಚಲೋ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಕಪ್ಪತಗುಡ್ಡ ಸೇರಿದಂತೆ ಎಲ್ಲ ಬಗರಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರ ನೀಡಲು ಒತ್ತಾಯಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ ನೇತೃತ್ವದಲ್ಲಿ ಬೆಳಗಾವಿ ಚಲೋ ಹೋರಾಟದಲ್ಲಿ ಭಾಗಿಯಾಗಲು ಜಿಲ್ಲೆಯ ರೈತ ಮುಖಂಡರು ಬೆಳಗಾವಿಗೆ ಪ್ರಯಾಣ ಬೆಳೆಸಿದರು.

ಶುಕ್ರವಾರ ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಎದುರು ಕೆಲಕಾಲ ಪ್ರತಿಭಟನೆ ನಡೆಸಿದ ಬಗರಹುಕುಂ ಸಾಗುವಳಿದಾರರು, ಅರಣ್ಯಾಧಿಕಾರಿಗಳ ವಿರುದ್ಧ ಘೋಷಣೆ ಕೂಗಿ, ಸರಕಾರ ಈ ಕೂಡಲೇ ಹಕ್ಕುಪತ್ರ ನೀಡಬೇಕು ಎಂದು ಒತ್ತಾಯಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶಂಕರಗೌಡ ಜಾಯನಗೌಡ್ರ, ಕಪ್ಪತಗುಡ್ಡ ಅರಣ್ಯ ಪ್ರದೇಶವನ್ನು ಅವೈಜ್ಞಾನಿಕವಾಗಿ ಅಭಯಾರಣ್ಯ ಎಂದು ಘೋಷಣೆ ಮಾಡಿ, ಬಗರ್ ಹುಕುಂ ಸಾಗುವಳಿದಾರರನ್ನು ಒಕ್ಕಲೆಬ್ಬಿಸುವ ಪ್ರಯತ್ನ ಮಾಡುತ್ತಿದ್ದಾರೆ.

ಅರಣ್ಯ ಇಲಾಖೆಯ ಈ ಕರಾಳ ಕಾನೂನನ್ನು ತೆ-ಗೆದು ಅರಣ್ಯ ಸಾಗುವಳಿ ಮಾಡಿದವರಿಗೆ ಹಕ್ಕುಪತ್ರ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಶಿವಯೋಗಯ್ಯ ಶಶಿಮಠ, ಬಸವರಾಜ ವಡ್ಡರ, ಶರಣಪ್ಪ ಕಟ್ಟಿಮನಿ, ಬಸವಣ್ಣೆಯ್ಯ ಹಿರೇಮಠ, ಬಸವರಾಜ ವಡ್ಡರ, ಮಂಜು ಬುರ್ಲಿ, ರಾಯಪ್ಪ ಹಾವಿನ, ಫಕೀರಪ್ಪ ಕುಲಮರ, ಬೀರಪ್ಪ ಲಮಾಣಿ, ಶರಣಪ್ಪ ಬ್ಯಾಳಿ, ಕೇಶವ ರಾಠೋಡ, ತಿಮ್ಮಣ್ಣ ವಡ್ಡರ, ಮುತ್ತಣ್ಣ ವಡ್ಡರ ಮುಂತಾದವರು ಉಪಸ್ಥಿತರಿದ್ದರು.

# ಕ್ರೀಡೆಯಲ್ಲಿ ಆಸಕ್ತಿ ಬೆಳೆಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಮನೋರಮಾ ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ ವಾರ್ಷಿಕ ಒಳಾಂಗಣ ಕ್ರೀಡಾಕೂಟ ಜರುಗಿತು.

ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ ವಹಿಸಿದ್ದರು. ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳಿಗೆ ಕ್ರೀಡೆಗಳು ಅವಶ್ಯಕ. ಬದುಕಿನಲ್ಲಿ ಶಿಸ್ತು, ಸಂಯಮ ಕಲಿಸುವುದರೊಂದಿಗೆ ಕ್ರಮಬದ್ಧತೆಯನ್ನು ರೂಢಿಸುತ್ತದೆ. ಆದಕಾರಣ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಆಸಕ್ತಿ ಬೆಳೆಸಿಕೊಳ್ಳಿ ಎಂದರು.

ಆಡಳಿತಾಧಿಕಾರಿ ಕಿಶೋರ ಮುದಗಲ್ಲ ಮಾತನಾಡಿ, ಆಟ ಆಡುವುದರಿಂದ ಮಾನಸಿಕ ಹಾಗೂ ದೈಹಿಕವಾಗಿ ಸದೃಢವಾಗುವರು.



ಪ್ರತಿಯೊಬ್ಬರೂ ತಮ್ಮ ಕ್ರೀಡಾ ಪ್ರತಿಭೆಗಳನ್ನು ಪ್ರದರ್ಶಿಸಿ ಉತ್ತಮ ಕ್ರೀಡಾಪಟುವಾಗಿರಿ ಎಂದರು.

ಸಂಯೋಜಕರಾದ ಪ್ರೊ. ಶಾಹಿದಾ ಶಿರಹಟ್ಟಿ ಮಾತನಾಡಿ, ಆಟೋಟಗಳಿಂದ ಮನಸ್ಸು ಉಲ್ಲಾಸಗೊಳ್ಳುತ್ತದೆ. ಕ್ರೀಡೆ ಇಲ್ಲದ ಜೀವನ ಕೀಡೆ ಹತ್ತಿದ ಹಣ್ಣಿನಂತೆ. ಆದ್ದರಿಂದ, ಎಲ್ಲರೂ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳಿ ಎಂದರು. ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಕಾಲೇಜಿನ ಸಂಯೋಜಕರಾದ ಪ್ರೊ ಶಾಹಿದಾ ಶಿರಹಟ್ಟಿ, ಕಾಲೇಜಿನ ದೈಹಿಕ ನಿರ್ದೇಶಕ ಖಯೂಮ ನವಲೂರ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಮಹಿಳಾ ಸಬಲೀಕರಣಕ್ಕೆ ಆರೋಗ್ಯ ರಕ್ಷಣೆ ಅವಶ್ಯಕ



**■ವಿಜಯಸಾಕ್ಷಿ ಸುದ್ದಿ, ಗದಗ**

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಡಿಯಲ್ಲಿ ಗದುಗಿನ ಉಡಚಮ್ಮ ದೇವಿ ಜ್ಞಾನವಿಕಾಸ ಕೇಂದ್ರದ ಸಭೆ ತ್ರಿಕೂಟೇಶ್ವರ ದೇವಸ್ಥಾನದಲ್ಲಿ ಆರೋಗ್ಯ ಮಾಹಿತಿ ಕಾರ್ಯಕ್ರಮ ಜರುಗಿತು.

ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡಿದ್ದ ಡಾ. ದೀಪಾ ಕಲ್ಲೇಶ ಮೂರಶಿಳ್ಳಿನ ಮಾತನಾಡಿ, ಇಂದಿನ ಆಧುನಿಕ ಯುಗದ, ಒತ್ತಡಯುಕ್ತ ಜೀವನದಲ್ಲಿ ಮಹಿಳೆಯರು ತಮ್ಮ ಆರೋಗ್ಯವನ್ನು ಸುಸ್ಥಿರವಾಗಿ ಕಾಯ್ದುಕೊಳ್ಳುವುದು ಕಷ್ಟ ಸಾಧ್ಯವಾಗುತ್ತಿದೆ. ಅದಕ್ಕೆ ಪೂರಕವಾದ ಜೀವನಶೈಲಿ ಮತ್ತು ಸರಿಯಾದ ಆಹಾರ ಕ್ರಮವನ್ನು ಅನುಸರಿಸಬೇಕಾಗಿದ್ದು ಅತೀ ಅವಶ್ಯಕ. ಮಹಿಳಾ ಸಬಲೀಕರಣಕ್ಕೆ ಶಿಕ್ಷಣ ಎಷ್ಟು ಮುಖ್ಯವೋ, ಅವರ ಆರೋಗ್ಯ ರಕ್ಷಣೆ ಕೂಡ ಅಷ್ಟೇ ಅವಶ್ಯಕ. ಆರೋಗ್ಯ ಮತ್ತು ಶಿಕ್ಷಣ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಅದಕ್ಕನುಸಾರವಾಗಿ ಸೇವಿಸುವ ಆಹಾರದಲ್ಲಿ ಕ್ಯಾಲ್ಸಿಯಂನ ಉಪಯುಕ್ತತೆ ಕುರಿತು ಸವಿಸ್ತಾರವಾಗಿ ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ಜ್ಞಾನ ವಿಕಾಸ ಕೇಂದ್ರದ ಸಮನ್ವಯ ಅಧಿಕಾರಿ ಗಂಗಮ್ಮನವರ ಮಾತನಾಡಿ, ಮಹಿಳೆಯರ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸರ್ಕಾರೇತರ ಸಂಸ್ಥೆಗಳಲ್ಲಿ ಒಂದಾಗಿರುವ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಘ ಅನೇಕ ನೂತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಅದರ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಭೆಯ ಅಧ್ಯಕ್ಷರಾದ ಸರೋಜ, ಸೇವಾ ಪ್ರತಿನಿಧಿ ಪಾರ್ವತಿ ಹಾಗೂ ಕೇಂದ್ರದ ಎಲ್ಲ ಸದಸ್ಯರು ಉಪಸ್ಥಿತರಿದ್ದರು.


**ಬಿಜೆಪಿ ಓಬಿಸಿ ಮೋರ್ಚಾದಿಂದ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ**

# ನಿಗಮಗಳಿಗೆ ಹಣ ನೀಡಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರಕಾರ ಹಿಂದುಳಿದ ವರ್ಗಗಳ ನಿಗಮಗಳಿಗೆ ಹಣ ಬಿಡುಗಡೆಗೊಳಿಸುವುದನ್ನು ನಿಲ್ಲಿಸಿದ್ದು, 'ನಿಗಮಗಳಿಗೆ ಹಣ ನೀಡಿ ಇಲ್ಲವೇ ನಿಗಮಗಳನ್ನು ಬಂದ್ ಮಾಡಿ' ಎಂಬ ಘೋಷವಾಕ್ಯದೊಂದಿಗೆ ಶುಕ್ರವಾರ ಬಿಜೆಪಿ ಓಬಿಸಿ ಮೋರ್ಚಾದ ಜಿಲ್ಲಾಧ್ಯಕ್ಷ ಸಿದ್ದೇಶ ಹೂಗಾರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ಸಿದ್ದೇಶ ಹೂಗಾರ, ಅಹಿಂದ ಹೆಸರಿನ ಮೇಲೆ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಪಕ್ಷ ಹಿಂದುಳಿದ ವರ್ಗಗಳ ಜನರ ಆರ್ಥಿಕ, ಕೃಷಿ ಮತ್ತು ಶಿಕ್ಷಣಕ್ಕಾಗಿ ಇರುವ ನಿಗಮಗಳಿಗೆ ಹಣ ಬಿಡುಗಡೆ ಮಾಡದಿರುವುದು ಅತ್ಯಂತ ನೋವಿನ ಸಂಗತಿ. ಈ ಹಿಂದಿನ ಬಿಜೆಪಿ ಸರಕಾರ ಹಿಂದುಳಿದ ವರ್ಗಗಳ ವಿವಿಧ ನಿಗಮಗಳಿಗೆ 1 ಸಾವಿರ ಕೋಟಿ ರೂ. ಅನುದಾನ ನೀಡಿತ್ತು. ಆದರೆ ಕಾಂಗ್ರೆಸ್ ಸರಕಾರ,




ಹಿಂದುಳಿದ ವರ್ಗದ ಕಲ್ಯಾಣಕ್ಕೆ ಯಾವುದೇ ಅನುದಾನ ನೀಡಿಲ್ಲ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಓಬಿಸಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಸುಧೀರ ಕಾಟಿಗರ, ಶಂಕರ ಭಾವಿ, ಅನಿಲ್ ಅಬ್ಬಿಗೇರಿ, ದೇವೇಂದ್ರಪ್ಪ ಹೂಗಾರ, ಸುರೇಶ್ ಮರಳಪ್ಪನವರ, ಅಶ್ವಿನಿ ಜಗತಾಪ, ಲಿಂಗರಾಜ್ ಮಲ್ಲಾಪುರ, ಬಿ.ಎ. ನರಗುಂದ, ಸಂತೋಷ್ ಅಕ್ಕಿ, ರವಿ ವಗ್ಗಣ್ಣನವರ, ರವಿ ಚವ್ಹಾಣ್, ರಾಜಣ್ಣ ಕಂಬಳಿ, ಜಗನ್ನಾಥಸಾ ಬಾಂಡಗೆ, ತೋಟಸಾ ಬಾಂಡಗೆ, ಬಸವರಾಜ ನೆಗಳೂರ ಮುಂತಾದವರಿದ್ದರು.

ಜಿಲ್ಲಾ ಓಬಿಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ವಿನಾಯಕ ಹಬೀಬ ಮಾತನಾಡಿ, ಅತ್ಯಂತ ಹಿಂದುಳಿದ ಸಮುದಾಯಗಳಾದ ಹೂಗಾರ, ಕುಂಬಾರ, ಕಂಬಾರ, ಗಾಣಿಗ, ಹಡಪದ, ಈಡಿಗ ಮತ್ತು ಮಾಳಿ ಸಮುದಾಯಗಳು ಕೂಡಾ ಆರ್ಥಿಕ ಮತ್ತು ಶೈಕ್ಷಣಿಕವಾಗಿ ಮುಖ್ಯ ವಾಹಿನಿಗೆ ಬರಬೇಕೆಂದು ಪ್ರತ್ಯೇಕ ಅಭಿವೃದ್ಧಿ ನಿಗಮಗಳನ್ನು ಬಿಜೆಪಿ ಸರಕಾರ ಸ್ಥಾಪಿಸಿತ್ತು. ಆದರೆ, ಕಾಂಗ್ರೆಸ್ ಸರ್ಕಾರ ಇಂತಹ ಸಣ್ಣ-ಸಣ್ಣ ಹಿಂದುಳಿದ ಸಮುದಾಯಗಳ ನಿಗಮಗಳಿಗೆ ಹಣ ಬಿಡುಗಡೆ ಮಾಡದೆ ಅನ್ಯಾಯ ಮಾಡಿದೆ ಎಂದು ಆರೋಪಿಸಿದರು.




ಪಿಕಾರ್ಡ್ ಬ್ಯಾಂಕ್‌ಗೆ ರವಿವಾರ ನಡೆದ ಚುನಾವಣೆಯಲ್ಲಿ ಭರ್ಜರಿ ವಿಜಯ ಸಾಧಿಸಿದ ವಿನೋದರೆಡ್ಡಿ (ಬಾಬು) ಅಳವಂಡಿ ಅವರಿಗೆ ಸೋಮವಾರ ಪಟ್ಟಣದ ಶಂಕರಭಾರತಿ ಮಠದಲ್ಲಿ ಬ್ರಾಹ್ಮಣ ಸಮಾಜದ ವತಿಯಿಂದ ಗೌರವಿಸಲಾಯಿತು. ವಿ.ಎಲ್. ಪೂಜಾರ, ಕೃಷ್ಣ ಕುಲಕರ್ಣಿ, ಗೋಪಾಲ ಪಡ್ನೀಸ್, ಅರವಿಂದ ದೇಶಪಾಂಡೆ, ಬಾಲಚಂದ್ರಭಟ್ ಹುಲಮನಿ, ಶ್ರೀಕಾಂತ ಪೂಜಾರ ಮತ್ತಿತರರಿದ್ದರು.

## ಆರ್ಯ ಈಡಿಗ ಸಮಾಜದ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಡಿ. 19ರಂದು ಆರ್ಯ ಈಡಿಗ ಸಮಾಜದ ಬೇಡಿಕೆಗಳ ಈಡೇರಿಕೆಗಾಗಿ ಚಳಿಗಾಲದ ಅಧಿವೇಶನ ನಡೆಯುವ ಬೆಳಗಾವಿ ಸುವರ್ಣಸೌಧದ ಎದುರು ಪರಮಪೂಜ್ಯ ಶ್ರೀ ಡಾ. ಪ್ರಣವಾನಂದ ಸ್ವಾಮಿಗಳವರ ನೇತೃತ್ವದಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ. ಗದಗ ಜಿಲ್ಲೆಯ ಎಲ್ಲ ತಾಲೂಕುಗಳಿಂದ ಸಮಾಜ ಬಾಂಧವರು ಭಾಗವಹಿಸಿ ಸಲಹೆ–ಸೂಚನೆಗಳನ್ನು ನೀಡುವ ಸಲುವಾಗಿ ಡಿ.17ರಂದು ಮಧ್ಯಾಹ್ನ 3 ಗಂಟೆಗೆ ಗದಗ ಜಿಲ್ಲಾ ಆರ್ಯ ಈಡಿಗ ಸಮಾಜದ ಸಭೆಯನ್ನು ಸಂಘದ ಕಾರ್ಯಾಲಯದಲ್ಲಿ ಕರೆಯಲಾಗಿದ್ದು, ಅಧ್ಯಕ್ಷತೆಯನ್ನು ಪ್ರಕಾಶ ಬೊಮ್ಮನಹಳ್ಳಿ ವಹಿಸುವರು. ಸಭೆಯಲ್ಲಿ ಗದಗ ಜಿಲ್ಲೆಯ ಎಲ್ಲ ತಾಲೂಕಿನ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಜಿಲ್ಲಾ ಕಾರ್ಯದರ್ಶಿ ಫಕ್ಕೀರೇಶ ಈಳಿಗೇರ ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

## ಟೆಂಪೋ ವಾಹನ ಪಲ್ಟಿ: ಚಾಲಕ ಸ್ಥಳದಲ್ಲೇ ಸಾವು

■ವಿಜಯಸಾಕ್ಷಿ ಸುದ್ದಿ, ಆನೇಕಲ್

ಚಾಲಕನ ನಿಯಂತ್ರಣ ತಪ್ಪಿ ಟೆಂಪೋ ವಾಹನ ಪಲ್ಟಿ ಆಗಿರುವ ಘಟನೆ ಬನ್ನೇರುಘಟ್ಟ ರಸ್ತೆ ಜೆಲ್ಲಿ ಮಿಷನ್ ಬಳಿ ಜರುಗಿದೆ. ಘಟನೆಯಿಂದ ಕ್ಯಾಂಟರ್ ವಾಹನ ಚಾಲಕ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಕ್ಯಾಂಟರ್ ಚಾಲಕ ಬೆಂಗಳೂರು ಕಡೆಯಿಂದ ವೇಗವಾಗಿ ಬರುತ್ತಿದ್ದ. ಈ ವೇಳೆ ನಿಯಂತ್ರಣ ತಪ್ಪಿ, ತಿರುವಿನಲ್ಲಿ ವಿದ್ಯುತ್ ಕಂಬಕ್ಕೆ ಡಿಕ್ಕಿಯಾಗಿ ಪಲ್ಟಿ ಹೊಡೆದಿದೆ. ಮೃತ ಚಾಲಕನ ಗುರುತು ಪತ್ತೆಯಾಗಿಲ್ಲ. ಸ್ಥಳಕ್ಕೆ ಬನ್ನೇರುಘಟ್ಟ ಪೊಲೀಸರು ಭೇಟಿ ಪರಿಶೀಲನೆ ಮಾಡಿದ್ದಾರೆ. ರಸ್ತೆಗೆ ಕ್ಯಾಂಟರ್ ವಾಹನ ಉರುಳಿ ಬಿದ್ದ ಹಿನ್ನೆಲೆ ಟ್ರಾಫಿಕ್ ಜಾಮ್ ಉಂಟಾಗಿತ್ತು, ಉರುಳಿ ಬಿದ್ದ ಕ್ಯಾಂಟರ್ ವಾಹನವನ್ನು ಪೊಲೀಸರು ತೆರವುಗೊಳಿಸಿದ್ದಾರೆ.

### ಕರ್ನಾಟಕ ಪ್ರವಾಸೋದ್ಯಮ ರೋಪ್‌ವೇಗಳ ವಿಧೇಯಕ ಅಂಗೀಕಾರ–ಸಚಿವ ಎಚ್.ಕೆ. ಪಾಟೀಲ

# 15 ಕಡೆ ರೋಪ್‌ವೇ ನಿರ್ಮಾಣಕ್ಕೆ ನಿರ್ಣಯ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ರಾಜ್ಯದಲ್ಲಿ 15 ಸ್ಥಳಗಳಲ್ಲಿ ರೋಪ್‌ವೇಗಳ ನಿರ್ಮಾಣಕ್ಕೆ ಸರ್ಕಾರ ನಿರ್ಣಯ ಕೈಗೊಂಡಿದೆ. ಇವುಗಳ ನಿರ್ಮಾಣ ಮತ್ತು ಕಾರ್ಯನಿರ್ವಹಣೆಯನ್ನು ಅಧಿಕೃತಗೊಳಿಸಿ, ಸುಗಮಗೊಳಿಸುವ ಹಾಗೂ ನಿಯಂತ್ರಿಸುವ ಸಲುವಾಗಿ 2024ನೇ ಸಾಲಿನ ಕರ್ನಾಟಕ ಪ್ರವಾಸೋದ್ಯಮ ರೋಪ್‌ವೇಗಳ ವಿಧೇಯಕವನ್ನು ಜಾರಿಗೆ ತರಲಾಗುತ್ತಿದೆ ಎಂದು ಕಾನೂನು ಸಂಸದೀಯ ವ್ಯವಹಕಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಸುವರ್ಣ ಸೌಧದಲ್ಲಿ ಸೋಮವಾರ ವಿಧಾನ ಸಭೆ ಕಲಾಪದಲ್ಲಿ ವಿಧೇಯಕವನ್ನು ಸದನದ ಪರ್ಯಾಲೋಚನೆಗೆ ಅವರು ಮಂಡಿಸಿದರು.

ರೋಪ್‌ವೇಗಳ ನಿರ್ಮಾಣದಿಂದ ರಾಜ್ಯದಲ್ಲಿ ಪ್ರವಾಸೋದ್ಯಮಕ್ಕೆ ಇಂಬು ದೊರಕಲಿದೆ. ಈ ರೋಪ್‌ವೇಗಳ ನಿರ್ಮಾಣದ ಜೊತೆಗೆ



ನಿರ್ವಹಣೆಯನ್ನು ಸಹ ಪ್ರತ್ಯೇಕವಾಗಿ ಇಡಲು ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ವಿಧೇಯಕವನ್ನು ಮಂಡಿಸಲಾಗುತ್ತಿದೆ. ಇದಕ್ಕೆ ಸದನ ಒಪ್ಪಿಗೆ ನೀಡುವಂತೆ ಅವರು ಕೋರಿದರು.

ಆರ್.ಅಶೋಕ್ ಮಾತನಾಡಿ, ವಿಧೇಯಕದಡಿ ರಚಿಸಲಾಗುವ ಸಲಹಾ ಪ್ರಾಧಿಕಾರದಲ್ಲಿ ಸರ್ಕಾರದ ಅರಣ್ಯ ಇಲಾಖೆ ಕಾರ್ಯದರ್ಶಿಗಳನ್ನು ಸಹ ಸದಸ್ಯರನ್ನಾಗಿ ನೇಮಿಸಬೇಕು. ರೋಪ್‌ವೇ ನಿರ್ಮಿಸಲು ಉದ್ದೇಶಿಸಿದ ಅನೇಕ ಸ್ಥಳಗಳು ಅರಣ್ಯ ಇಲಾಖೆ ವ್ಯಾಪ್ತಿಗೆ ಬರುತ್ತವೆ. ಇದರಿಂದ ಶೀಘ್ರವೇ ಅನುಮತಿ ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಶಾಸಕ ಡಾ. ಅಶ್ವಥ್‌ನಾರಾಯಣ ಮಾತನಾಡಿ, ರೋಪ್‌ವೇಗಳು ಮಲೆನಾಡು ಭಾಗದಲ್ಲಿ ಗುಡ್ಡದ ಮೇಲೆ ಕಾಲುದಾರಿಗಳ ನಿರ್ಮಾಣದಿಂದ ಉಂಟಾಗುವ ಭೂ ಕುಸಿತ ತಡೆಯಲು ಸಹಾಯಕವಾಗಿವೆ ಎಂದು ಅಭಿಪ್ರಾಯಪಟ್ಟರು.

ಶಾಸಕ ಅರಗ ಜ್ಞಾನೇಂದ್ರ ಮಾತನಾಡಿ, ರೋಪ್‌ವೇಗಳ ಸುರಕ್ಷತೆ ಹಾಗೂ ಗುಣಮಟ್ಟ ಪರಿಶೀಲನೆಗೆ ಸರ್ಕಾರ ವಿಧೇಯಕದಲ್ಲಿ ಹೆಚ್ಚಿನ ಮಹತ್ವ ನೀಡಬೇಕು ಎಂದರು. ಶಾಸಕ ಹೆಚ್.ಸಿ. ಬಾಲಕೃಷ್ಣ ಶ್ರವಣಬೆಳಗೊಳದಲ್ಲಿ ರೋಪ್ ವೇ ನಿರ್ಮಿಸಲು ಭಾರತೀಯ ಪುರಾತತ್ವ ಇಲಾಖೆ ಅನುಮತಿ ನೀಡುತ್ತಿಲ್ಲ. ಇದನ್ನು ಗಮನದಲ್ಲಿ ಇಟ್ಟುಕೊಂಡು ರೋಪ್‌ವೇ ಸಲಹಾ ಪ್ರಾಧಿಕಾರದಲ್ಲಿ ಪುರತತ್ವ ಇಲಾಖೆ ಅಧಿಕಾರಿಗಳನ್ನು ಸಹ ಸದಸ್ಯರನ್ನಾಗಿ ಮಾಡುವಂತೆ ಸಲಹೆ ನೀಡಿದರು.

ಶಾಸಕರು ಸಲಹೆ ನೀಡಿದ ಸೂಚನೆಗಳ ತಿದ್ದುಪಡಿಯೊಂದಿಗೆ ವಿಧೇಯಕಕ್ಕೆ ಸದನ ಧ್ವನಿ ಮತದಿಂದೊಂದಿಗೆ ಅಂಗೀಕಾರ ನೀಡಿತು.

### ವಿಧೇಯಕ ವಾಪಸ್ಸು

ರಾಜ್ಯಪಾಲರ ಸಲಹೆಯ ಮೇರೆಗೆ ಸಚಿವ ಎಚ್.ಕೆ. ಪಾಟೀಲ 2024ನೇ ಸಾಲಿನ ಕರ್ನಾಟಕ ವಿಧಾನ ಮಂಡಲ ಅನರ್ಹತಾ ನಿವಾರಣೆ ತಿದ್ದುಪಡಿ ವಿಧೇಯಕವನ್ನು ಹಿಂಪಡೆಯಲು ಸದನದಲ್ಲಿ ಅನುಮತಿ ಕೋರಿದರು. ವಿಧೇಯಕ ಹಿಂಪಡೆಯಲು ಸದನ ಅನುಮತಿ ನೀಡಿತು.

# ಕಾಂತೀಲಾಲ ಬನ್ನಾಲಿಯವರಿಗೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಕ್ಷದ ಹಿರಿಯ ಧುರೀಣರು, ಮಾಜಿ ಜಿಲ್ಲಾಧ್ಯಕ್ಷರು, ರಾಜ್ಯ ದ್ರಾಕ್ಷಾರಸ ನಿಗಮದ ಮಾಜಿ ಅಧ್ಯಕ್ಷ ಕಾಂತೀಲಾಲ ಬನ್ನಾಲಿ (62) ಅವರ ನಿಧನದ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಾರ್ಯಾಲಯದಲ್ಲಿ ಶ್ರದ್ಧಾಂಜಲಿ ಅರ್ಪಿಸಲಾಯಿತು.

ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಎಂ.ಎಂ. ಹಿರೇಮಠ ಬನ್ನಾಲಿಯವರ ಕುರಿತು ಮಾತನಾಡಿದರು.



ಈ ಸಂದರ್ಭದಲ್ಲಿ ಅನಿಲ ಅಬ್ಬಿಗೇರಿ, ಉಷಾ ದಾಸರ, ಅಶೋಕ ಸುಧೀರ ಸಂಕಣ್ಣವರ, ಕಾಟಿಗರ, ಸಂತೋಷ ಅಕ್ಕಿ, ಸುರೇಶ ಮರಳಪ್ಪನವರ, ರಮೇಶ ಸಜ್ಜಗಾರ, ವಿನಾಯಕ ಮಾನ್ವಿ, ಮಹೇಶ ದಾಸರ, ಯೋಗೇಶ್ವರ ಭಾವಿಕಟ್ಟಿ, ರೇಖಾ ಬಂಗಾರಶೆಟ್ಟರ, ಮೇಘಾ ಕೊಟ್ಟೂರ, ಮಾಂತೇಶ ಬಾತಾಖಾನಿ, ನಾಗರಾಜ ತಳವಾರ, ಪುನೀತ್ ಬೆನಕನವಾರಿ, ವಿನಾಯಕ ಹಬೀಬ್, ಮಂಜುನಾಥ ವಡ್ಡರ, ವಿನೋದ ಹಂಸನೂರ ಸೇರಿದಂತೆ ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.

# ವಿಶೇಷ ಕಾರ್ಯಕಾರಿಣಿ ಸಭೆ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ಜಿಲ್ಲಾ ಕಾರ್ಯಾಲಯದಲ್ಲಿ ಗದಗ ಜಿಲ್ಲಾ ಯುವ ಮೋರ್ಚಾ ವಿಶೇಷ ಕಾರ್ಯಕಾರಿಣಿ ಸಭೆ ಜರುಗಿತು. ಮುಖ್ಯ ಅತಿಥಿಗಳಾಗಿ ಜನಸಂಘದ ಹಿರಿಯ ಕಾರ್ಯಕರ್ತ ಬಿ.ಬಿ. ಓಂಕಾರ ಭಾಗವಹಿಸಿ ಮಾತನಾಡಿ, ಜನಸಂಘದ ಕಾಲದಿಂದ ಇಲ್ಲಿಯವರೆಗೆ ಪಕ್ಷ ಕಟ್ಟಿದ ಹಾಗೂ ಬೆಳೆದುಬಂದ ದಾರಿಯನ್ನು ವಲೋಕಿಸಿ, ಇಂದಿನ ಕಾರ್ಯಕರ್ತರು ಅದೃಷ್ಟವಂತರು. ಮುಂದಿನ ದಿನಮಾನಗಳಲ್ಲಿ ಪಕ್ಷ ವಹಿಸಿದ ಎಲ್ಲ ಕೆಲಸ ಕಾರ್ಯಗಳನ್ನು ಅತ್ಯಂತ ನಿಷ್ಠೆಯಿಂದ ನಿರ್ವಹಿಸಬೇಕು. ದೃಢ ಸಂಕಲ್ಪದಿಂದ ಆತ್ಮಸ್ಥೈರ್ಯದಿಂದ ಮುನ್ನುಗ್ಗಿ. ದೇಶದ ಬೆಳವಣಿಗೆಗೆ ಸಂಘದ ಎಲ್ಲ ಯೋಜನೆಗಳು ಕಾರ್ಯರೂಪಕ್ಕೆ ಬರುತ್ತಿದ್ದು, ಮುಂದಿನ ದಿನ ವಿಕಸಿತ ಭಾರತವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದರು.

ಇನ್ನೋರ್ವ ಮುಖ್ಯ ಅತಿಥಿ ಕೃಷ್ಣಾ ಹೊಂಬಾಳೆ ಮಾತನಾಡಿ, ಪಕ್ಷ ಕೊಟ್ಟ ಎಲ್ಲ ಕೆಲಸ ಕಾರ್ಯಗಳನ್ನು ಶ್ರದ್ಧೆಯಿಂದ ನಿರ್ವಹಿಸಿರಿ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ಉಪಾಧ್ಯಕ್ಷ ಭದ್ರೇಶ ಕುಸ್ಲಾಪೂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಶಕ್ತಿ ಕತ್ತಿ, ಯುವ ಮೋರ್ಚಾದ ಎಲ್ಲ ಮಂಡಲ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

### ಪಂಚಮಸಾಲಿ ಮುಖಂಡರ ಬಂಧನಕ್ಕೆ ಖಂಡನೆ

# ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನೆಗೆ ಭಾನುವಾರ ರೋಣ ಪಟ್ಟಣಕ್ಕೆ ಆಗಮಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಪ್ಪು ಪಟ್ಟಿ ಪ್ರದರ್ಶನ ಮಾಡುವ ಬಗ್ಗೆ ಮಾಹಿತಿ ಹಿನ್ನೆಲೆಯಲ್ಲಿ ರೋಣ ಪಟ್ಟಣದಲ್ಲಿ ಪಂಚಮಸಾಲಿ ಯುವ ಮುಖಂಡರಾದ ಉಮೇಶ ಚನ್ನು ಪಾಟೀಲ, ಶಿವಕುಮಾರ ದಡ್ಡೂರ, ಮಲ್ಲಿಕಾರ್ಜುನ ಸಂತೋಜಿ, ವೀರಣ್ಣ ನಾಯಕ ಅವರನ್ನು ಬಂಧಿಸಿ ನರೇಗಲ್ಲ ಠಾಣೆಗೆ ಕರೆತಂದದ್ದಕ್ಕಾಗಿ ಸ್ಥಳೀಯ ಮುಖಂಡರು ನರೇಗಲ್ಲ ಠಾಣೆಯ ಮುಂಭಾಗದಲ್ಲಿ 2 ಗಂಟೆಗಳ ಕಾಲ ರಾಜ್ಯ ಹೆದ್ದಾರಿಯನ್ನು ತಡೆದು ಪ್ರತಿಭಟಿಸಿದರು.

ಪಂಚಮಸಾಲಿ ಸಮಾಜದ ಅಧ್ಯಕ್ಷ ಮುತ್ತಣ್ಣ ಪಲ್ಲೇದ ಮಾತನಾಡಿ, ಪಂಚಮಸಾಲಿ ಸಮಾಜದ ಹೋರಾಟವನ್ನು ಪೊಲೀಸ್ ಇಲಾಖೆಯ ಮೂಲಕ ಹತ್ತಿಕ್ಕುವ ಕೆಲಸವನ್ನು ಸರಕಾರ ಮಾಡುತ್ತಿದೆ. ರೋಣ ನಗರದಲ್ಲಿ ಯಾವುದೇ ಪ್ರತಿಭಟನೆಗೆ ಸಮಾಜ ಕರೆ ನೀಡಿರಲಿಲ್ಲ. ಆದರೂ, ವಿನಾಕಾರಣ ನಮ್ಮ ಮುಖಂಡರನ್ನು ಬಂಧಿಸುವ ಮೂಲಕ ಸಮಾಜಕ್ಕೆ ಅಪಮಾನ ಮಾಡಲಾಗಿದೆ. ತತ್‌ಕ್ಷಣವೇ ಅವರನ್ನು ಬಿಡುಗಡೆಗೊಳಿಸಬೇಕು ಎಂದು ಆಗ್ರಹಿಸಿದರು.

ಪ.ಪಂ ಮಾಜಿ ಅಧ್ಯಕ್ಷ ಶರಣಪ್ಪ ಕಲಾಲಬಂಡಿ, ಕಲ್ಮೇಶ ತೊಂಡಿಹಾಳ, ಮಾಜಿ ಸದಸ್ಯ ಶಶಿಧರ ಸಂಕನಗೌಡ್ರ, ಬಸವರಾಜ ಕೊಟಗಿ ಮಾತನಾಡಿ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು. ಪರಿಸ್ಥಿತಿ ವಿಕೋಪಕ್ಕೆ ತಲುಪುತ್ತಿದ್ದಂತೆ ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಬಂದು ಪ್ರತಿಭಟನಾಕಾರರ ಮನವೊಲಿಸಲು ಮುಂದಾದರೂ ಯಾವುದೇ ಪ್ರಯೋಜನವಾಗಲಿಲ್ಲ. ಬಂಧಿತರನ್ನು ಬಿಡುಗಡೆಗೊಳಿಸುವವರೆಗೂ ಪ್ರತಿಭಟನೆ ಮುಂದುವರೆಸಲಾಗುವುದು ಎಂದರು. ಮುಖ್ಯಮಂತ್ರಿಗಳ ಕಾರ್ಯಕ್ರಮ ಮುಗಿಯುತ್ತಿದ್ದಂತೆ ಬಂಧಿತರನ್ನು ಬಿಡುಗಡೆಗೊಳಿಸಲಾಯಿತು. ನಂತರ ಪ್ರತಿಭಟನೆಯನ್ನು ಕೈಬಿಡಲಾಯಿತು.

ಗಂಗಾಧರ ಕೊಟಗಿ, ಅಶೋಕ ಬೇವಿನಕಟ್ಟಿ, ನಿಂಗಪ್ಪ ಕಣವಿ, ಶ್ರೀಶೈಲಪ್ಪ ಬಂಡಿಹಾಳ, ಮಲ್ಲಿಕಾರ್ಜುನಗೌಡ ಭೂಮನಗೌಡ್ರ, ಸಿದ್ದಪ್ಪ ನರಗುಂದ, ಶಾಂತಪ್ಪ ಚಿಕ್ಕೊಪ್ಪ, ವೀರಣ್ಣ ಧರಣೆಪ್ಪಗೌಡ್ರ, ರಮೇಶ ಕೋಲಕಾರ, ರುದ್ರೇಶ ಕೊಟಗಿ, ಕುಬೇರಪ್ಪ ತಮ್ಮನಗೌಡ್ರ, ಸಂತೋಷ ಮಾಳವಾಡ, ವೀರಣ್ಣ ಗುಜಮಾಗಡಿ, ರವಿ ಮುಗಳಿ ಮುಂತಾದವರಿದ್ದರು.

# ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಗೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಕಾರ್ಮಿಕ ಇಲಾಖೆ, ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಗದಗ ವತಿಯಿಂದ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಗೆ ಆನ್‌ಲೈನ್ ಮೂಲಕ ಅರ್ಜಿ ಹಾಕುವ ಕಾರ್ಯಕ್ರಮ ನಗರದ ತೆ–ಋಂಟದಾರ್ಯ ಮಠದ ಆವರಣದಲ್ಲಿ ಜರುಗಿತು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಶ್ರೀ ವೀರಘಂಟಿ ಮಡಿವಾಳ ಮಾಚಿದೇವ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಹಾಗೂ ಮಡಿವಾಳ ಸಮಾಜದ ಬಾಂಧವರು ಈ ಯೋಜನೆಯಲ್ಲಿ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಿದರು.



ಜಿಲ್ಲಾಧ್ಯಕ್ಷ ಮಲ್ಲಪ್ಪ ಮಡಿವಾಳ, ಗದಗ ತಾಲೂಕಾಧ್ಯಕ್ಷ ಆನಂದ ಮಡಿವಾಳ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಮಿಕ ಇಲಾಖೆ ಸಿಬ್ಬಂದಿ ಮಹಮ್ಮದ ಜಾಫರ ಸಿದ್ದಿ, ಗೌರವಾಧ್ಯಕ್ಷ ಶಿವಪ್ಪ ಮಡಿವಾಳರ, ರಾಜ್ಯ ಮಡಿವಾಳ ಸಂಘದ ಉಪಾಧ್ಯಕ್ಷ ಫಕ್ಕೀರಪ್ಪ ಮಡಿವಾಳರ, ಗದಗ ಜಿಲ್ಲಾ ಮಡಿವಾಳ ಸಂಘದ ಜಿಲ್ಲಾ ಸದಸ್ಯರಾದ ನಾಗರಾಜ ಎಸ್. ಮೋಟಿ, ಕಲ್ಲಪ್ಪ ಮಡಿವಾಳರ, ಗಂಗಮ್ಮ ಮಡಿವಾಳರ, ನಾಗಾವಿ, ಕಣವಿ, ಹರ್ತಿ, ಬೆಳಹೊಡ, ಬೆನಕೊಪ್ಪ, ಅಸುಂಡಿ, ಹುಲಕೋಟಿ, ಕೋಟುಮಚಗಿ, ಲಿಂಗದಾಳ, ಹೊಂಬಳ ಗ್ರಾಮಗಳ ಮಡಿವಾಳ ಸಮಾಜದ ಮಹಿಳೆಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಹಿಂದೂಗಳ ಹೋರಾಟವನ್ನು ಹತ್ತಿಕ್ಕುವ ಪ್ರಯತ್ನ ಸರ್ಕಾರದಿಂದ ನಡೆದಿದೆ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಹಿಂದೂಗಳ ಹೋರಾಟವನ್ನು ಹತ್ತಿಕ್ಕುವ ಪ್ರಯತ್ನ ಸರ್ಕಾರದಿಂದ ನಡೆದಿದೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು, ಬೆಳಗಾವಿಯಲ್ಲಿ ಪಂಚಮಸಾಲಿ ಮೀಸಲಾತಿ ಹೋರಾಟಕ್ಕೆ ಅವಕಾಶ ನೀಡಲಾಗದು ಎಂದಿರುವ ಜಿಲ್ಲಾಧಿಕಾರಿಯವರನ್ನು ಭೇಟಿಯಾಗುತ್ತೇನೆ.

ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದ್ದೀವಾ ಅಥವಾ ಇನ್ಯಾವುದಾದರೂ ಯುಗದಲ್ಲಿ ವಾಸವಾಗಿದ್ದೀವಾ ಅಂತ ಅವರನ್ನು ಕೇಳಬೇಕಿದೆ.

ಅದಲ್ಲದೆ ಹಿಂದೂಗಳ ಹೋರಾಟವನ್ನು ಹತ್ತಿಕ್ಕುವ ಪ್ರಯತ್ನ ಸರ್ಕಾರದಿಂದ ನಡೆದಿದೆ ಎಂದು ಹೇಳಿದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ ರೂ. 25,000/–ಗಳಂತೆ ಶಿಷ್ಯವೇತನ ನೀಡಲಾಗುವುದು.

ಅರ್ಹ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಗದಗ ಜಿಲ್ಲೆಯ ಸಂಬಂಧಪಟ್ಟ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗರ ಭೇಟಿ ನೀಡಿ ಅರ್ಜಿಯನ್ನು ಪಡೆದು ಡಿಸೆಂಬರ್ 23 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಧ ಮಕ್ಕಳು ನಿಜವಾದ ದೇವರು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ತಾಲೂಕಿನ ಹೊಳೆ ಆಲೂರಿನ ಜ್ಞಾನಸಿಂಧು ಅಂಧ ಮಕ್ಕಳ ವಸತಿ ಶಾಲೆಯಲ್ಲಿರುವ 85ಕ್ಕೂ ಹೆಚ್ಚು ಅಂಧ ವಿದ್ಯಾರ್ಥಿಗಳಿಗೆ ಕೊಪ್ಪಳದ ಪಾನಘಂಟಿ ಫೌಂಡೇಶನ್ ಭಾಗ್ಯನಗರ ಹಾಗೂ ವಾಸವಿ ಕ್ಲಬ್ ಭಾಗ್ಯನಗರ ವತಿಯಿಂದ ಸ್ವೆಟರ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾರದಾ ಪಾನಘಂಟಿ ಮಾತನಾಡಿ, ಪ್ರಸ್ತುತ ಸಮಾಜದಲ್ಲಿ ನಿಜವಾದ ದೇವರು ಎಂದರೆ ಅಂಧ



ಮಕ್ಕಳು. ಕಣ್ಣಿಲ್ಲದಿದ್ದರೂ ನವ ಸಮಾಜದ ಕನಸು ಕಟ್ಟಿಕೊಂಡವರು. ಯಾವುದೇ ತಾತ್ಸಾರ–ಅಸೂಯೆ ಮನೋಭಾವ ಇಲ್ಲದೆ ತಮ್ಮ ಪ್ರತಿಭೆಯ ಮೂಲಕವೇ ಬೆಳಕಾದವರು. ಇಂತವರಿಗೆ ಚಳಿಗಾಲದಲ್ಲಿ ಆರೋಗ್ಯ ಕಾಪಾಡಿಕೊಳ್ಳಲು ನಮ್ಮ ಕೈಲಾದಮಟ್ಟಿಗೆ ಸಹಾಯ ಮಾಡಲು ಅವಕಾಶ ಒದಗಿದ್ದು ನಮ್ಮ ಪುಣ್ಯ ಎಂದರು.

ಸಂಸ್ಥೆಯ ಸಂಸ್ಥಾಪಕರು ಹಾಗೂ ಅಂಧ ಮಕ್ಕಳ ಪಾಲಿನ ಬೆಳಕಾದ ತುಳಸಮ್ಮ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರಾದ ಜ್ಞಾನಸಿಂಧು ಅಂಧ ವಿದ್ಯಾರ್ಥಿಗಳು ಯೋಗ, ಸಂಗೀತ ಮತ್ತು ಮಲ್ಲಗಂಬ ಪ್ರದರ್ಶನ ಮಾಡುವ ಮೂಲಕ ಎಲ್ಲರ ಮನಗೆದ್ದರು. ವಿಶೇಷ ಕೌಶಲ್ಯ ಹಾಗೂ ಪ್ರತಿಭೆಯ ಮೂಲಕ ಗುರುತಿಸಿಕೊಂಡ ಅಂಧ ವಿದ್ಯಾರ್ಥಿಗಳು ಬ್ರೈಲ್ ಲಿಪಿ ವಿದ್ಯಾಭ್ಯಾಸ ಹಾಗೂ ದಿನನಿತ್ಯದ ಕಾರ್ಯಚಟುವಟಿಕೆಗಳ ಬಗ್ಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ ವಾಸವಿ ಕ್ಲಬ್‌ನ ಕಾರ್ಯದರ್ಶಿ ಲಕ್ಷ್ಮೀ ಪಾನಘಂಟಿ, ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಮುಂಡರಗಿಮಠ, ಸಾಹಿತಿ ಡಾ. ಬಿ.ಎನ್. ಹೊರಪೇಟಿ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತಿ ಇದ್ದರು.


## ನಿಧನ



**ಇಂದ್ರಗೌಡ ಪಾಟೀಲ**

ಗದಗ: ರೋಣ ತಾಲೂಕಿನ ಸಂದಿಗವಾಡ ಗ್ರಾಮದ ಇಂದ್ರಗೌಡ ಬಸನಗೌಡ ಪಾಟೀಲ (88) ಭಾನುವಾರ ನಿಧನರಾದರು. ಮೃತರು ನಾಲ್ಕು ಜನ ಪುತ್ರರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

**ಗುರುಶಾಂತಯ್ಯ ಆರ್. ಲದ್ದಿಮಠ**



ರೋಣ: ಪಟ್ಟಣದ ಶ್ರೀ ನಗರದ ನಿವಾಸಿ ಗುರುಶಾಂತಯ್ಯ ಆರ್. ಲದ್ದಿಮಠ(84) ಸೋಮವಾರ ನಿಧನರಾದರು. ಮೃತರು ಪುತ್ರ, ಪುತ್ರಿ ಸೇರಿ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಉದಯವಾಣಿ ದಿನಪತ್ರಿಕೆಯ ರೋಣ ತಾಲೂಕು ವರದಿಗಾರ ಸೋಮಶೇಖರ್ ಲದ್ದಿಮಠ ಅವರ ತಂದೆಯಾಗಿರುವ ಗುರುಶಾಂತಯ್ಯ ಆರ್ ಲದ್ದಿಮಠ ಅವರು ರೋಣ ತಾಲೂಕು ತಹಸೀಲ್ದಾರ ಆಗಿ ಕಾರ್ಯನಿರ್ವಹಿಸಿ ಜನಪ್ರಿಯತೆ ಗಳಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka